ವಿಜಯಪುರ | ಸಂಪುಟ 01 | ಸಂಚಿಕೆ 233 | ಪುಟ 4 | ₹ 3.00
https://udayarashminews.com
udayarashmi 7026028778

# ಉದಯ ರಶ್ಮಿ


ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com Title Code: KARKAN28047 ಬುಧವಾರ, ನವೆಂಬರ್ 8, 2023

“ಜನಪ್ರತಿನಿಧಿಗಳು ಜನರಿಗೆ ಉತ್ತರದಾಯಿ ಆಗಿರಬೇಕು. ಜನರ ಆಶಯ ಈಡೇರಿಸಲಾಗದಿದ್ದರೆ ರಾಜಕೀಯ ನಿವೃತ್ತಿ ಅಥವಾ ರಾಜಿನಾಮೆ ನೀಡಬೇಕು. ನನ್ನ ಕ್ಷೇತ್ರದ ಜನರಿಗೆ ನೀರು ಬರದಿದ್ದರೆ ಯಾವ ಪುರುಷಾರ್ಥಕ್ಕೆ ನಾನು ರಾಜಕಾರಣದಲ್ಲಿರಬೇಕು?



ಉದಯರಶ್ಮಿ ▶

– ಯಶವಂತರಾಯಗೌಡ ಪಾಟೀಲ
ಶಾಸಕರು, ಇಂಡಿ

### ಅಧಿಕಾರಿಗಳ ಅಸಮರ್ಪಕ ನಿರ್ವಹಣೆಗೆ ಬೇಸತ್ತ ಶಾಸಕ ಯಶವಂತರಾಯಗೌಡ ಎಚ್ಚರಿಕೆ!

# ಕೆರೆ-ಕಾಲುವೆಗಳಿಗೆ ನೀರು ಹರಿಸದಿದ್ದರೆ ರಾಜೀನಾಮೆ!

**ಉದಯರಶ್ಮಿ ನ್ಯೂಸ್**

ವಿಜಯಪುರ: ಇಂಡಿ ಮತಕ್ಷೇತ್ರದ ಕೆರೆ ಮತ್ತು ಕಾಲುವೆಗಳಿಗೆ ನೀರು ಹರಿಸದಿದ್ದರೆ ರಾಜೀನಾಮೆ ನೀಡುವುದಾಗಿ ಇಂಡಿ ಆಡಳಿತಾರೂಢ ಕಾಂಗ್ರೆಸ್ ಶಾಸಕ ಯಶವಂತರಾಯಗೌಡ ವಿ. ಪಾಟೀಲ ಎಚ್ಚರಿಕೆ ನೀಡಿದ್ದಾರೆ.

ಮಂಗಳವಾರ ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೀರಾವರಿ ಯೋಜನೆಗಳಡಿ ಇಂಡಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಭೌತಿಕವಾಗಿ ಕಾಮಗಾರಿಗಳು ಮುಗಿದಿವೆ. ಆದರೆ, ಈ ಯೋಜನೆಗಳು ಪೂರ್ಣಗೊಂಡು 22 ವರ್ಷಗಳು ಕಳೆದರೂ ಈವರೆಗೂ ಕಾಲುವೆಯ ಟೇಲ್ ಎಂಡ್(ಕೊನೆಯ ತುದಿ) ವರೆಗೂ ನೀರು ಹರಿಯುತ್ತಿಲ್ಲ.

ಈಗ ಭೀಕರ ಬರ ಎದುರಾಗಿರುವ ಹಿನ್ನಲೆಯಲ್ಲಿ ರೈತರು, ಜನ, ಜಾನುವಾರುಗಳು ಸಂಕಷ್ಟದಲ್ಲಿದ್ದಾರೆ. ಅಧಿಕಾರಿಗಳ ವೈಫಲ್ಯದಿಂದಾಗಿ ನೀರು ಬರುತ್ತಿಲ್ಲ. ಕೂಡಲೇ ನೀರು ಹರಿಸದಿದ್ದರೆ ಅಧಿಕಾರದಲ್ಲಿದ್ದರೂ ಪ್ರಯೋಜನವಿಲ್ಲ. ಹೀಗಾಗಿ ರಾಜೀನಾಮೆ ನೀಡಬೇಕಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದರು.

ಜನಪ್ರತಿನಿಧಿಗಳು ಜನರಿಗೆ ಉತ್ತರದಾಯಿ ಆಗಿರಬೇಕು. ಜನರ ಆಶಯಗಳನ್ನು ಈಡೇರಿಸಲು ಆಗದಿದ್ದರೆ ರಾಜಕೀಯ ನಿವೃತ್ತಿಯಾಗಬೇಕು ಅಥವಾ ರಾಜಿನಾಮೆ ನೀಡಬೇಕು. ಇಂಡಿ ಮತಕ್ಷೇತ್ರದ ಕಟ್ಟ ಕಡೆಯ ರೈತರಿಗೆ ನೀರು ಸಿಗುತ್ತಿಲ್ಲ. ಜನರಿಗೆ ನೀರು ಬರದಿದ್ದರೆ ಯಾವ ಪುರುಷಾರ್ಥಕ್ಕೆ ರಾಜಕಾರಣ ಮಾಡಬೇಕು. ಜನರ ಸಮಸ್ಯೆಯನ್ನು ನೇರವಾಗಿ ಎದೆಗಾರಿಕೆಯಿಂದ ಹೇಳುತ್ತೇನೆ. ಇಂಡಿ ತಾಲೂಕು ಸಂಪೂರ್ಣ ಸಮಸ್ಯೆಗೆ ಒಳಗಾಗಿದೆ. ಕುಡಿಯುವ ನೀರು, ಬೆಳೆಗಳಿಗೆ ನೀರಾವರಿಗೆ ನೀರು ಸಿಗದಂತಾಗಿದೆ. ನಾನಾ ಏತ ನೀರಾವರಿ ಯೋಜನೆಗಳಡಿ ಕಾಲುವೆಗಳಾದರೂ ನೀರು ಬರುತ್ತಿಲ್ಲ. ಅತ್ತ ಭೀಮಾನದಿಯಲ್ಲೂ ನೀರೂ ಸಿಗುತ್ತಿಲ್ಲ. ಉಜನಿ ಡ್ಯಾಂನಿಂದ ಮಹಾರಾಷ್ಟ್ರದ ಸೋಲಾಪುರಕ್ಕೆ ಪೈಪ್ ಲೈನ್ ಮಾಡುತ್ತಿದ್ದಾರೆ. ಅದಾದ ಬಳಿಕ ಉಜನಿ ಡ್ಯಾಂನಿಂದ ಭೀಮಾ ನದಿಗೆ ನೀರೇ ಬರುವುದಿಲ್ಲ. ಈಗಾಗಲೇ ಈ ಕುರಿತು ಮುಖ್ಯಮಂತ್ರಿಗಳ ಗಮನ ಸೆಳೆದಿದ್ದೇನೆ ಎಂದು ಶಾಸಕರು ತಿಳಿಸಿದರು.



ನನ್ನ ಕ್ಷೇತ್ರದ ಜನರಿಗೆ ನೀರು ಸಿಗದೆ ಹೋದರೆ ಯಾವ ಹಂತಕ್ಕೆ ಹೋಗಲೂ ಸಿದ್ಧ. ನೀರು ಬರದೆ ಹೋದರೆ ನಾನು ಯಾರಿಗೂ ಕೇರ್ ಮಾಡುವುದಿಲ್ಲ. ಗುತ್ತಿ ಬಸವಣ್ಣ ಏತ ನೀರಾವರಿ ಯೋಜನೆ, ಇಂಡಿ ಶಾಖಾ ಕಾಲುವೆ ಮೂಲಕ ಹರಿಸಲಾಗುವ ನೀರು ಕೇವಲ ಇಂಡಿ ಗಡಿವರೆಗೆ ಮಾತ್ರ ಬರುತ್ತದೆ. ನನಗೆ ಪಕ್ಷದ ಬಗ್ಗೆ ಬದ್ಧತೆ ಇದೆ. ಕಾಂಗ್ರೆಸ್ ಪಕ್ಷದಿಂದಲೇ ರಾಜಕಾರಣ ಮಾಡಿದ್ದೇನೆ, ಇಲ್ಲಿಯೇ ನಿವೃತ್ತಿ ಆಗುತ್ತೇನೆ ಎಂದು ಅವರು ಸ್ಪಷ್ಟಪಡಿಸಿದರು.

### ಇಂಡಿ ನೂತನ ಜಿಲ್ಲೆಯಾಗದಿದ್ದರೆ ರಾಜಕೀಯ ನಿವೃತ್ತಿ

ಇಂಡಿಯನ್ನು ನೂತನ ಜಿಲ್ಲಾ ಕೇಂದ್ರ ಮಾಡುವ ನಿರ್ಧಾರಕ್ಕೆ ನಾನು ಬದ್ಧನಾಗಿದ್ದೇನೆ. ಇದು ಬಹಳ ದಶಕಗಳ ಕೂಗು. ನಮ್ಮ ಪಕ್ಷದ ನಾಯಕರನ್ನು ಕೇಳಿಯೇ ಈ ವಿಚಾರದಲ್ಲಿ ಮಾತು ಕೊಟ್ಟಿದ್ದೇನೆ. ಇಂಡಿ ಜಿಲ್ಲಾ ಕೇಂದ್ರ ಮಾಡಲು 2028ರವರೆಗೂ ಅವಕಾಶವಿದೆ. ಅಲ್ಲಿಯವರೆಗೂ ಕಾಯುತ್ತೇನೆ. ನಮ್ಮ ಸರಕಾರ ಇಂಡಿ ಜಿಲ್ಲಾ ಕೇಂದ್ರ ಮಾಡುವ ಭರವಸೆ ಇದೆ. ಒಂದು ವೇಳೆ 2028 ರೊಳಗೆ ಇಂಡಿ ಜಿಲ್ಲಾ ಕೇಂದ್ರ ಮಾಡದಿದ್ದರೆ 2028ಕ್ಕೆ ರಾಜಕಾರಣದಲ್ಲಿ ಇರಲ್ಲ. ನಮ್ಮನ್ನು ರಾಜಕಾರಣದಲ್ಲಿ ಇಟ್ಟುಕೊಳ್ಳಬೇಕೆಂದರೆ ಇಂಡಿ ಜಿಲ್ಲಾ ಕೇಂದ್ರ ಮಾಡುತ್ತಾರೆ. ಬೇಡ ಎಂದರೆ ಬಿಟ್ಟಿರುತ್ತಾರೆ. ಮೈಕ್ರೋ ಮ್ಯಾನೇಜ್ಮೆಂಟ್ ▯▯▯ಂಡ್ ಎಡ್ಮಿನಿಸ್ಟ್ರೇಷನ್ ಗಾಗಿ ಇಂಡಿ ಜಿಲ್ಲಾ ಕೇಂದ್ರವಾಗಬೇಕು ಎಂದು ಅವರು ಪುನರುಚ್ಚರಿಸಿದರು.


ರಾಜಸ್ಥಾನ ಕರ್ನಾಟಕಕ್ಕಿಂತಲೂ ಕಡಿಮೆ ಶಾಸಕರನ್ನು ಹೊಂದಿದೆ. ಅಭಿವೃದ್ಧಿಯಲ್ಲೂ ಹಿಂದುಳಿದಿದೆ. ಅಲ್ಲಿ ಕೇವಲ 200 ಜನ ಶಾಸಕರಿದ್ದರೂ 52ಕ್ಕೂ ಹೆಚ್ಚು ಜಿಲ್ಲೆಗಳನ್ನು ಮಾಡಲಾಗಿದೆ. ಅದೇ ರೀತಿ ನಮ್ಮಲ್ಲಿಯೂ ಆಡಳಿತದ ದೃಷ್ಟಿಯಿಂದ ಇಂಡಿ ನೂತನ ಜಿಲ್ಲೆಯಾಗಬೇಕು. ಇಂಡಿ, ಚಡಚಣ, ದೇವರ ಹಿಪ್ಪರಗಿ, ಆಲಮೇಲ ಮತ್ತು ಸಿಂದಗಿ ತಾಲೂಕುಗಳನ್ನು ಸೇರಿಸಿ ನೂತನ ಜಿಲ್ಲೆ ಮಾಡಬೇಕು. ಜಿಲ್ಲಾ ವಿಭಜನೆಯಲ್ಲಿ ಆ ಭಾಗದ ಜನರ ಅಭಿಪ್ರಾಯ ಮುಖ್ಯವಾಗುತ್ತದೆ. ಈಗಾಗಲೇ ಈ ಕುರಿತು ಸಿಎಂ ಗಮನ ಸೆಳೆದಿದ್ದು, ರಾಜ್ಯ ಸರಕಾರದಿಂದ ವಿಜಯಪುರ ಜಿಲ್ಲಾಡಳಿತಕ್ಕೆ ಜನಾಭಿಪ್ರಾಯ ಸಂಗ್ರಹಿಸಲು ಸೂಚನೆ ಬಂದಿದೆ. ಹೀಗಾಗಿ ಇಂಡಿ ನೂತನ ಜಿಲ್ಲೆಯಾಗಬೇಕು. ಅದಾಗದಿದ್ದರೆ ಇಂಡಿ ಮತ್ತು ಸಿಂದಗಿ ತಾಲೂಕುಗಳಿಗೆ ವಿಶೇಷ ಸ್ಥಾನಮಾನ ನೀಡಿ ಕಲ್ಯಾಣ(ಹೈದರಾಬಾದ) ಕರ್ನಾಟಕ ಭಾಗಕ್ಕೆ ನೀಡಿರುವಂತೆ ಆರ್ಟಿಕಲ್ 371(ಜೆ) ಗೆ ಸೇರ್ಪಡೆ ಮಾಡಬೇಕು ಎಂದು ಆಗ್ರಹಿಸಿದರು.

ರಾಜ್ಯದಲ್ಲಿ ಕೆಲವು ಸಚಿವರವನ್ನು ಹೊರತು ಪಡಿಸಿದರೆ ಉಳಿದವರು ತಂತಮ್ಮ ಕ್ಷೇತ್ರಗಳಿಗೆ ಮಾತ್ರ ಸೀಮಿತವಾಗಿ ಕೆಲಸ ಮಾಡುತ್ತಿದ್ದಾರೆ. ರಾಜ್ಯದ ಬಗ್ಗೆ ಅವರಿಗೆ ಕಲ್ಪನೆಯೇ ಇಲ್ಲ. ತಮ್ಮ ಮತಕ್ಷೇತ್ರದ ಅಭಿವೃದ್ಧಿಗೆ ಮಾತ್ರ ಗಮನ ಹರಿಸಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಉಳಿದ ಶಾಸಕರು ಎಲ್ಲಿಗೆ ಹೋಗಬೇಕು? ಈ ತಾರತಮ್ಯದ ಹಿನ್ನೆಲೆಯಲ್ಲಿಯೇ ಈ ಹಿಂದೆ ಉಮೇಶ ಕತ್ತಿ ಪ್ರತ್ಯೇಕ ರಾಜ್ಯದ ಕೂಗು ಎತ್ತಿದ್ದರು. ನಮಗೆ ಪ್ರತ್ಯೇಕ ರಾಜ್ಯ ಬೇಕಿಲ್ಲ. ಆದರೆ, ಆ ಭಾವನೆ ಬರುತ್ತಿದೆ ಎಂದು ಯಶವಂತರಾಯಗೌಡ ವಿ. ಪಾಟೀಲ ಮಾರ್ಮಿಕವಾಗಿ ಹೇಳಿದರು.

### ರಾಜ ನುಡಿ

ಕೊಡೆಯ ಒಳಗಿರುವ ಕಡ್ಡಿಗಳು ಮಾತನಾಡಿಕೊಳ್ಳುತ್ತಾ ಬಟ್ಟೆಯನ್ನು ಹೀಗೆ ಗೇಲಿ ಮಾಡಿದವು. 'ಮಳೆ, ಗಾಳಿ, ಬಿಸಿಲು ಏನೇ ಇದ್ದರೂ ಸ್ವಲ್ಪವೂ ನಮ್ಮ ಅನುಭವಕ್ಕೆ ಬರದ ಹಾಗೆ ಸುಖಿಯಾಗಿದ್ದೇವೆ ನಾವು. ಕೊಡೆಯ ಮೇಲಿನ ಬಟ್ಟೆಯು ಬುದ್ಧಿ ಇಲ್ಲದೆ ಎಲ್ಲವನ್ನು ತಾನೇ ಅನುಭವಿಸುತ್ತಿದೆ' ಎಂದು. ಮೇಲಿನ ಬಟ್ಟೆ ಸ್ವಲ್ಪ ಬಾಗಿತು. ಗಾಳಿ ಒಳ ಬಂದು ಕೊಡೆ ಉಲ್ಟಾ ತಿರುಗಿತು. ಮಾಡುವುದನ್ನು ನಿಲ್ಲಿಸುವವರೆಗೆ ಮಾಡಿದವರ ತ್ಯಾಗದ ಮಹತ್ವ ತಿಳಿಯದು.

-ಡಾ. ರಾಜಶೇಖರ ನಾಗೂರ



### ವಚನ ಚಿಂತನ 229

**ನಮಃ ಶಿವಾಯ ಓಂ ಎಂಬ ಮಂತ್ರ ಮತ್ತು ಚಕ್ರಗಳು**

*ಆಧಾರಚಕ್ರದಲ್ಲಿ ನ ಕಾರಸ್ವಾಯತ.
ಸ್ವಾಧಿಷ್ಠಾನಚಕ್ರದಲ್ಲಿ ಮಃ ಕಾರ ಸ್ವಾಯತ.
ಮಣಿಪೂರಕಚಕ್ರದಲ್ಲಿ ಶಿ ಕಾರ ಸ್ವಾಯತ.
ಅನಾಹತಚಕ್ರದಲ್ಲಿ ವಾ ಕಾರ ಸ್ವಾಯತ.
ವಿಶುದ್ಧಿಚಕ್ರದಲ್ಲಿ ಯ ಕಾರ ಸ್ವಾಯತ.
ಆಜ್ಞಾಚಕ್ರದಲ್ಲಿ ಓಂ ಕಾರ ಸ್ವಾಯತ.
ಇದು ಕಾರಣ, ಶರಣನ ಕಾಯವೇ ಷಡಕ್ಷರಮಂತ್ರಶರೀರವಾಗಿ,
ಸರ್ವಾಂಗವೆಲ್ಲವು ಜ್ಞಾನ ಕಾಯ ಕಾಣಾ,
ಮಹಾಲಿಂಗಗುರು ಶಿವಸಿದ್ಧೇಶ್ವರ ಪ್ರಭುವೇ.
– ತೋಂಟದ ಸಿದ್ದಲಿಂಗ ಶಿವಯೋಗಿಗಳು*

ವಚನಕಾರರು ಅಂಗದೊಳಗಿನ ಲಿಂಗಶಕ್ತಿಯ ಅರಿವನ್ನು ಜಾಗೃತಗೊಳಿಸಲು ಯೋಗಸಿದ್ಧಿಯ ವಿಧಾನವನ್ನು ಅನುಸರಿಸಿರುವುದನ್ನು ನಾವು ಅವರ ಹಲವು ವಚನಗಳಲ್ಲಿ ಕಾಣುತ್ತೇವೆ. ತೋಂಟದ ಸಿದ್ದಲಿಂಗ ಶಿವಯೋಗಿಗಳು ಪ್ರಸ್ತುತ ಈ ವಚನದಲ್ಲಿ ಅಂಗದೊಳಗೆ ಅಡಗಿರುವ ಆರು ಚಕ್ರಗಳಾದ ಆದಾರಚಕ್ರ (ಗುದದ್ವಾರದಮೇಲ್ಭಾಗದಲ್ಲಿಯ ಸ್ಥಾನ) ಸ್ವಾಧಿಷ್ಠಾನಚಕ್ರ (ಜನನೇಂದ್ರೀಯ ಮೇಲ್ಭಾಗದ ಸ್ಥಾನ) ಮಣಿಪೂರಕ ಚಕ್ರ(ಹೊಕ್ಕಳುಭಾಗದಲ್ಲಿ) ಅನಾಹತಚಕ್ರ (ಹೃದಯಭಾಗದಲ್ಲಿ) ವಿಶುದ್ಧಿಚಕ್ರ (ಗಂಟಲುಭಾಗದಲ್ಲಿ) ಆಜ್ಞಾಚಕ್ರ (ಎರಡು ಕಣ್ಣಿನ ಮೇಲ್ಭಾಗದ ಹುಬ್ಬುಗಳ ಮದ್ಯಸ್ಥಳ)ಗಳ ಬಗ್ಗೆ ವಿವರವಾಗಿ ತಿಳಿಸುತ್ತ ಯೋಗಸಾಧನೆಯಲ್ಲಿ ತೊಡಗಿದ ಶರಣನಿಗೆ ಮನವನ್ನು ಪ್ರತಿಯೊಂದು ಚಕ್ರದಲ್ಲಿ ನಿಲ್ಲಿಸಿದಾಗ ಆ ಚಕ್ರವು ಜಾಗೃತಗೊಂಡು ಉಂಟಾಗುವ ಪರಿಣಾಮವನ್ನು ವಿವರಿಸುತ್ತ, ನಮಃ ಶಿವಾಯ ಓಂ ಎಂಬ ಮಂತ್ರವು ಅಂಗದಲ್ಲಿ ಪ್ರತಿಧ್ವನಿಸುವುದರಿಂದ ಶರಣನ ಕಾಯವೇ ಷಡಕ್ಷರಮಂತ್ರಶರೀರವಾಗಿ ಸರ್ವಾಂಗವೆಲ್ಲವು ಜ್ಞಾನ ಕಾಯವಾಗಿ ಅನುಭಾವ ಒಡಮೂಡುತ್ತೆಂದು ತಿಳಿಸಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

### ಹಿಂಗಾರು ಹಂಗಾಮಿಗೆ ಮಾರ್ಚ್ ಅಂತ್ಯದವರೆಗೂ ನೀರು ಹರಿಸಲು ರೈತರ ಒತ್ತಾಯ

# ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ರೈತರ ಪ್ರತಿಭಟನೆ

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಐಸಿಸಿ ಸಭೆ ನಡೆಯುವ ಆಲಮಟ್ಟಿಯ ಕೆಬಿಜೆಎನ್ ಎಲ್ ಎಂಡಿ ಕಚೇರಿ ಎದುರು ಬೆಳಿಗ್ಗೆಯಿಂದಲೇ ಬೇರೆ ಬೇರೆ ಭಾಗದಿಂದ ಬಂದಿದ್ದ ನೂರಾರು ರೈತರು ಮಂಗಳವಾರ ಪ್ರತಿಭಟನೆ ನಡೆಸಿದರು.

ಕಾಲುವೆಯ ಕೊನೆಯ ಭಾಗದವರೆಗೂ ನೀರು ಹರಿಸಬೇಕು, ಹಿಂಗಾರು ಹಂಗಾಮಿಗೆ ಮಾರ್ಚ್ ಅಂತ್ಯದವರೆಗೂ ನೀರು ಹರಿಸಬೇಕು ಎಂಬುದೇ ಬಹುತೇಕ ರೈತರ ಬೇಡಿಕೆಯಾಗಿತ್ತು.

ಹಿಂಗಾರಿಗೆ ನೀರಿಲ್ಲ ಎಂದು ತಿರ್ಮಾನವಾದೊಡನೆ ಶಾಂತವಾಗಿದ್ದ ರೈತರು ಕೆಬಿಜೆಎನ್ ಎಲ್ ಎಂಡಿ ಕಚೇರಿಯ ಸಭಾಂಗಣದ ಗೇಟ್ ಹೊರಕ್ಕೆ ಯಾದಗೀರದಿಂದ ಬಂದಿದ್ದ ಕರ್ನಾಟಕ ಪ್ರಾಂತ ರೈತ ಸಂಘದ



ಕಾರ್ಯಕರ್ತರು ಪ್ರತಿಭಟನೆ ನಡೆಸಿ ಅಧಿಕಾರಿಗಳನ್ನು ಹೊರಕ್ಕೆ ಬಿಡಲಿಲ್ಲ.

ಸಚಿವ ಆರ್.ಬಿ. ತಿಮ್ಮಾಪುರ ಅವರಿಗೆ ಮುತ್ತಿಗೆ ಹಾಕಲು ಪ್ರಯತ್ನಿಸಿದರು. ಪೊಲೀಸರು ಮಧ್ಯಪ್ರವೇಶಿಸಿ ಅವರ ವಾಹನ ಹೊರಬಿಟ್ಟರು. ಆದರೆ ನಂತರ ಕೆಬಿಜೆಎನ್ ಎಲ್ ಅಧಿಕಾರಿಗಳನ್ನು ಸಭೆ ನಡೆಯುವ ಹೊರ ಗೇಟ್ ನಲ್ಲಿ ರೈತರು ಹೊರ ಹೋಗದಂತೆ ತಡೆಗಟ್ಟಿದರು.

**ಜೇವರ್ಗಿ ರೈತರ ಪ್ರತಿಭಟನೆ:**

ಕಲಬುರಗಿ ಜಿಲ್ಲೆಯ ಜೇವರ್ಗಿ, ಕಾಚಾಪುರ, ಯಡ್ರಾಮಿ, ಮಳ್ಳಿ, ವಡಗೇರ, ಸುಂಬಡ ಭಾಗದಿಂದ ಆಗಮಿಸಿದ್ದ ನೂರಾರು ರೈತರು, 2024 ರ ಮಾರ್ಚ್ ಅಂತ್ಯದವರೆಗೂ ನೀರು ಹರಿಸಬೇಕು ಎಂದು ಅವರು ಪ್ರತಿಭಟನೆ ನಡೆಸಿದರು.

ಕಾಲುವೆ ಸಮರ್ಪಕ ನೀರು ಹರಿಸದ ಕಾರಣ ಮುಂಗಾರು ಹಂಗಾಮಿಗೆ ಬೆಳೆದ ಈಗಾಗಲೇ ತೊಗರಿ, ಹತ್ತಿ ಬೆಳೆ ನಾಶವಾಗಿದೆ. ಈಗ ಮೆಣಸಿನಕಾಯಿ, ಕಡಲೆ, ಜೋಳ, ಕುಶಬಿ ಬೆಳೆಗೆ ನೀರು ಅಗತ್ಯವಿದೆ ಎಂದು ಅವರು ಪ್ರತಿಭಟನೆ ನಡೆಸಿದರು.

ನಾರಾಯಣಪುರ ಎಡದಂಡೆ ಕಾಲುವೆಯ ಕೊನೆ ಭಾಗಕ್ಕೆ ನೀರು ಹರಿಸಬೇಕು, ಕಾಲುವೆಯ ದುರಸ್ತಿ ಹಾಗೂ ಸ್ವಚ್ಛಗೊಳಿಸುವ ಕಾರ್ಯ ಕೈಗೊಳ್ಳಬೇಕು ಎಂದು ಆಗ್ರಹಿಸಿ ವಾಸುದೇವ ಮೇಟಿ ನೇತೃತ್ವದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಕಾರ್ಯಕರ್ತರು ಕೂಡಾ ಪ್ರತಿಭಟನೆ ನಡೆಸಿದರು.

ಕಲಬುರಗಿ, ಯಾದಗೀರ ಭಾಗದ ರೈತರನ್ನು ಸಭೆ ನಡೆಯುವ ಸನೀಹಕ್ಕೆ ಬಿಟ್ಟ ಪೊಲೀಸರು, ಈ ಭಾಗದ ರೈತರನ್ನು ಸಭೆ ನಡೆಯುವ ಒಂದು ಕಿ.ಮೀ ದೂರದ ರಾಮಲಿಂಗೇಶ್ವರ ದೇವಸ್ಥಾನದ ಹತ್ತಿರ ವೃತ್ತದ ಬಳಿಯೇ ನಿಲ್ಲಿಸಿದರು. ಆ ರೈತರ ಮುಖಂಡರನ್ನು ಮಾತ್ರ ಒಳಕ್ಕೆ ಬಿಟ್ಟರು. ಇದು ಕೂಡಾ ಅಸಮಾಧಾನಕ್ಕೆ ಕಾರಣವಾಯಿತು.

**ಭಾರಿ ಪೊಲೀಸ್ ಬಂದೋಬಸ್ತ:**

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ ನೇತೃತ್ವದಲ್ಲಿ ಡಿವೈಎಸ್ ಪಿ ಕರುಣಾಕರಶೆಟ್ಟಿ, ಮೂವರು ಸಿಪಿಐ, ಏಳು ಜನ ಪಿಎಸ್ ಐ ಸೇರಿ 65 ಜನ ಪೊಲೀಸ್ ಸಿಬ್ಬಂದಿ ಹಾಗೂ ಎರಡು ಡಿಆರ್ ವ್ಯಾನ್ ಪೊಲೀಸರು ಇದ್ದರು.

### ಹಿಂಗಾರು ಹಂಗಾಮಿನ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ತಿರ್ಮಾನ :ಸಚಿವ ಆರ್.ಬಿ.ತಿಮ್ಮಾಪುರ

# ಹಿಂಗಾರು ಹಂಗಾಮಿಗೆ ಕಾಲುವೆ ಜಾಲಕ್ಕೆ ನೀರು ಪೂರೈಕೆ ಸಾಧ್ಯವಿಲ್ಲ

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ನೀರಿನ ಕೊರತೆಯಿಂದಾಗಿ 2023-24ನೇ ಸಾಲಿನ ಹಿಂಗಾರು ಹಂಗಾಮಿಗೆ ಕಾಲುವೆ ಜಾಲಕ್ಕೆ ನೀರು ಪೂರೈಸಲು ಸಾಧ್ಯವಾಗುವುದಿಲ್ಲ. ಅಚ್ಚುಕಟ್ಟು ಪ್ರದೇಶದ ರೈತರು ಸಹಕರಿಸಬೇಕು ಎಂದು ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ಹೇಳಿದರು.

ಆಲಮಟ್ಟಿಯ ಕೃಷ್ಣಾ ಭಾಗ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಕಚೇರಿ ಸಭಾಂಗಣದಲ್ಲಿ 2023-24ನೇ ಸಾಲಿನ ಹಿಂಗಾರು ಹಂಗಾಮಿನ ನೀರಾವರಿ ಸಲಹಾ ಸಮಿತಿ ಸಭೆ ನಡೆಸಿ ನಂತರ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಹಿಂಗಾರು ಹಂಗಾಮಿಗೆ 2023-24ನೇ ಸಾಲಿನಲ್ಲಿ ಆಲಮಟ್ಟಿ ಜಲಾಶಯಕ್ಕೆ ಒಳಹರಿವು ಅ.14ರಂದು ಕ್ಷೀಣವಾಗಿದ್ದು, ಅ.15ರಂದು ಸಂಪೂರ್ಣ ಸ್ಥಗಿತವಾಗಿದೆ. ಡಿ.5ರಂದು ಆಲಮಟ್ಟಿ ಜಲಾಶಯದ



ಮಟ್ಟ ಅಂದಾಜು 513.00 ಮೀಟರ್ ಎತ್ತರದಲ್ಲಿ 50 ಟಿಎಂಸಿ ನೀರು ಇರಬಹುದಾಗಿದೆ. ಇದರಲ್ಲಿ ಜೀವಜಲ 32 ಟಿಎಂಸಿ ಹಾಗೂ ನಾರಾಯಣಪುರ ಜಲಾಶಯದ ಜೀವಜಲ 12 ಟಿಎಂಸಿ ಒಟ್ಟು 44 ಟಿಎಂಸಿ ಜೀವಜಲ ಲಭ್ಯವಾಗಬಹುದು ಎಂದರು.

ಡಿ.5ರಿಂದ 2024ರ ಜು.30ವರೆಗೆ ಕುಡಿವ ನೀರು, ಕೆರೆಗಳನ್ನು ತುಂಬುವುದು, ಕಾಲುವೆಗಳ ಮೂಲಕ ಕುಡಿವ ನೀರಿನ ಯೋಜನೆಗಳಿಗೆ ನೀರು ಪೂರೈಸುವುದು, ಭಾಷ್ಪಿಕರಣ, ಉಷ್ಣ ವಿದ್ಯುತ್ ಸ್ಥಾವರಗಳಿಗೆ ಹಾಗೂ ಕೈಗಾರಿಕೆಗಳಿಗೆ, ಬ್ಯಾರೇಜ್‌ಗಳಲ್ಲಿ ನೀರಿನ ಸಂಗ್ರಹಣೆ, ರೈತರ ಹಿನ್ನೀರಿನ ಬಳಕೆ ಇತ್ಯಾದಿ ಸೇರಿದಂತೆ ಈ ಮೊದಲು ಕಾಯ್ದಿರಿಸಿಕೊಂಡ 37.25 ಟಿಎಂಸಿ, ಬದಲಾಗಿ 40 ಟಿಎಂಸಿ ನೀರನ್ನು ಕಾಯ್ದಿರಿಸಲಾಗಿದೆ ಎಂದರು.

ಡಿ.5ರಂದು ನೀರಾವರಿ ಬಳಕೆಗಾಗಿ ಲಭ್ಯವಾಗಬಹುದಾದ ನೀರಿನ ಪ್ರಮಾಣ ಕೇವಲ 5 ಟಿಎಂಸಿ ಮಾತ್ರ ಇರುತ್ತದೆ. ವಾತಾವರಣದಲ್ಲಿ ನಿತ್ಯ ಉಷ್ಣತೆ ಪ್ರಖರವಾಗುತ್ತಿದ್ದು ಲಭ್ಯವಾಗುವ ನೀರಿನ ಪ್ರಮಾಣವು ಸಹ ಭಾಷ್ಪಿಕರಣಗೊಳ್ಳುವ ಸಂಭವವಿದೆ. ಇದರಿಂದ ಅಗತ್ಯವಿರುವ 75 ಟಿಎಂಸಿ ನೀರು ಲಭ್ಯವಿಲ್ಲದೇ ಇರುವ ಕಾರಣ 2023-24ನೇ ಸಾಲಿನ ಹಿಂಗಾರು ಹಂಗಾಮಿಗೆ ಕಾಲುವೆ ಜಾಲಕ್ಕೆ ನೀರು ಪೂರೈಸಲು ಸಾಧ್ಯವಾಗುವುದಿಲ್ಲ ಎಂದು ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದರು.

ಸದ್ಯ ಚಾಲ್ತಿಯಲ್ಲಿರುವ ವೇಳಾಪಟ್ಟಿಯಂತೆ ನ.18ರವರೆಗೆ ಕಾಲುವೆ ಜಾಲಕ್ಕೆ ನೀರು ಪೂರೈಸುವುದನ್ನು ಚಾಲ್ತಿಯಲ್ಲಿಡಲಾಗುವುದು, ನ. 19ರಿಂದ 26ರವರೆಗೆ 8 ದಿನ ಕಾಲುವೆ ಜಾಲಕ್ಕೆ ನೀರು ಪೂರೈಸುವುದನ್ನು ಸ್ಥಗಿತಗೊಳಿಸಲಾಗುವುದು. ನಂತರ ನ.27ರಿಂದ ಡಿ.4ರವರೆಗೆ 8 ದಿನಗಳಿಗೆ ಕಾಲುವೆ ಜಾಲಕ್ಕೆ ನೀರು ಪೂರೈಸುವುದನ್ನು ಮಿತವ್ಯಯ ಸಾಧಿಸಿ ಕೊನೆಯಂಚಿನವರೆಗೆ ಪೂರೈಸಲು ಅನುಕೂಲವಾಗುವಂತೆ ಹೆಚ್ಚುವರಿ ದಿನಗಳಿಗೆ ವಿಸ್ತರಿಸಲು ನಿರ್ಣಯಿಸಲಾಗಿದೆ. ರೈತರು ಅನಗತ್ಯವಾಗಿ ನೀರು ಪೋಲು ಮಾಡದೆ ಬಳಸಿ ಕೆಬಿಜೆನ್ನೆಲ್ ಅಧಿಕಾರಿಗಳಿಗೆ ಸಹಕರಿಸಬೇಕು ಎಂದರು.

**ಮುಖ್ಯಮಂತ್ರಿಗಳ ಜತೆ ಚರ್ಚೆ:** ಆಲಮಟ್ಟಿ ಭಾಗದ ಜಮೀನುಗಳಿಗೆ ಹಿಂಗಾರು ಹಂಗಾಮಿಗೆ ನೀರು ಹರಿಸಲು ಕೇವಲ 9 ಟಿಎಂಸಿ ಅಡಿ ನೀರು ಅಗತ್ಯವಿದೆ, ಅದಕ್ಕಾಗಿ ನೀರು ಹರಿಸುವುದು ಬೇಡವೋ ಎಂಬುದನ್ನು ಮುಖ್ಯಮಂತ್ರಿಗಳ ಜತೆ ಚರ್ಚಿಸಿ ನಿರ್ಣಯಿಸಲಾಗುವುದು ಎಂದು ಪತ್ರಕರ್ತರ ಪ್ರಶ್ನೆಗೆ ತಿಮ್ಮಾಪುರ ಉತ್ತರಿಸಿದರು.

ಕಾಲುವೆಯ ಕೊನೆ ಭಾಗಕ್ಕೆ ನೀರು ಹರಿಯುವಂತೆ ಕಟ್ಟುನಿಟ್ಟಾಗಿ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಅವರು ತಿಳಿಸಿದರು.

ಸಭೆಯಲ್ಲಿ ಸಂಸದ ರಮೇಶ ಜಿಗಜಿಣಗಿ, ಸಂಸದ ಪಿ.ಸಿ.ಗದ್ದಿಗೌಡರ, ಮುದ್ದೇಬಿಹಾಳ ಶಾಸಕ ಸಿ.ಎಸ್.ನಾಡಗೌಡ, ಎಂಎಲ್ಸಿ ಪಿ.ಎಚ್.ಪೂಜಾರ, ಸಿಂದಗಿ ಶಾಸಕ ಅಶೋಕ ಮನಗೂಳಿ, ನಾಗಠಾಣದ ವಿಠ್ಠಲ ಕಟಕದೊಂಡ, ಇಂಡಿಯ ಯಶವಂತರಾಯಗೌಡ ಪಾಟೀಲ, ಹುನಗುಂದದ ವಿಜಯಾನಂದ ಕಾಶಪ್ಪನವರ, ಬೀಳಗಿಯ ಜೆ.ಟಿ.ಪಾಟೀಲ, ಜಮಖಂಡಿಯ ಜಗದೀಶ ಗುಡಗಂಟಿ, ಸುರಪುರ ಶಾಸಕ ರಾಜಾವೆಂಕಟಪ್ಪ ನಾಯಕ, ದೇವದುರ್ಗ ಶಾಸಕಿ ಕರೆಮ್ಮ ನಾಯಕ, ಎಂಎಲ್ಸಿ ಹಣಮಂತ ನಿರಾಣಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಯ ಜಿಲ್ಲಾಕಾರಿಗಳು. ಆಲಮಟ್ಟಿ, ನಾರಾಯಣಪುರ, ಭೀಮರಾಯನಗುಡಿ, ರಾಂಪೂರ ವಲಯದ ಮುಖ್ಯಅಭಿಯಂತರರು ಇದ್ದರು.

# ನ.9 ರಂದು ಜಲ ದೀಪಾವಳಿ ಕಾರ್ಯಕ್ರಮ ಆಯೋಜನೆ




**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ರಾಷ್ಟ್ರೀಯ ಜೀವನೋಪಾಯ ಅಭಿಯಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ನಿರ್ದೇಶನದ ಮೇರೆಗೆ ಅಮೃತ 2.0 ಕಾರ್ಯಕ್ರಮದಡಿ ಮಹಿಳೆಯರಿಗಾಗಿ ನೀರು, ನೀರಿಗಾಗಿ ಮಹಿಳೆಯರು ಧ್ಯೇಯ ವಾಕ್ಯದಡಿ ಜಲ ದೀಪಾವಳಿ ಕಾರ್ಯಕ್ರಮವನ್ನು ನ. 9 ರಂದು ನಿಡಗುಂದಿಯ ಡಬ್ಲೂಟಿಪಿ ಘಟಕದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಎಚ್.ಎಸ್.ಚಿತ್ತರಗಿ ಹೇಳಿದರು.

ಪಟ್ಟಣದ ಪುರಸಭೆಯ ತಮ್ಮ ಕಾರ್ಯಾಲಯದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನ.9 ರಂದು ಬೆಳಗ್ಗೆ 9 ಗಂಟೆಗೆ ಸ್ಥಳೀಯ ವಿವಿಧ ಸ್ವ-ಸಹಾಯ ಸಂಘದಿಂದ ಆಯ್ಕೆ ಮಾಡಲಾದ 30 ಮಹಿಳೆಯರ ತಂಡ, ಪುರಸಭೆಯ ಸದಸ್ಯರನ್ನು ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ಆಗುವ ನಿಡಗುಂದಿಯ ಡಬ್ಲೂಟಿಪಿ ಘಟಕಕ್ಕೆ ಕರೆದುಕೊಂಡು ಹೋಗಲಾಗುವುದು. ಅಲ್ಲಿ ಮನೆಗಳಿಗೆ ಶುದ್ಧ ಮತ್ತು ಸುರಕ್ಷಿತ ಕುಡಿಯುವ ನೀರು ಪೂರೈಕೆಯ ಪ್ರಕ್ರಿಯೆ, ನಾಗರಿಕರು ಉತ್ತಮ ಗುಣಮಟ್ಟದ ನೀರನ್ನು ಪಡೆದುಕೊಳ್ಳಲು ಅನುಸರಿಸುವ ವಿವಿಧ ಪರೀಕ್ಷಾ ಮಾದರಿಯ ಪ್ರಕ್ರಿಯೆಯ ಬಗ್ಗೆ ವಿವಿಧ ಸಂಪನ್ಮೂಲ ವ್ಯಕ್ತಿಗಳಿಂದ ಮಾಹಿತಿಯನ್ನು ತಿಳಿಸುವ ಜೊತೆಗೆ ನೀರಿನ ಮೂಲ ಸೌಕರ್ಯದ ಬಗ್ಗೆ ಮಾಲೀಕತ್ವದ ಭಾವನೆಯನ್ನು ಮಹಿಳೆಯರಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಂಡಿದೆ. ನೀರು ಹೇಗೆ ಶುದ್ಧೀಕರಣ ಮಾಡಲಾಗುತ್ತದೆ. ಇದಕ್ಕೆ ಎಷ್ಟು ವೆಚ್ಚ ತಗಲುತ್ತದೆ ಸೇರಿದಂತೆ ಇತ್ಯಾದಿ ಮಾಹಿತಿಯನ್ನು ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ಸ್ವ-ಸಹಾಯ ಸಂಘದ ಸದಸ್ಯೆಯರಿಗೆ ತಿಳಿಸಲಾಗುವುದು. ಈ ಕಾರ್ಯಕ್ರಮದಲ್ಲಿ ಇವರು ಮಾಹಿತಿ ಪಡೆದುಕೊಂಡ ನಂತರ ಅವರು ಪಟ್ಟಣದ ತಮ್ಮ ವ್ಯಾಪ್ತಿಯಲ್ಲಿ ಮುಂದಿನ ದಿನಗಳಲ್ಲಿ ನೀರು ಅಮೂಲ್ಯವಾಗಿರುವ ಕುರಿತು ಜಾಗೃತಿ ಮೂಡಿಸುವ ಜೊತೆಗೆ ನೀರು ಹಿತಮಿತವಾಗಿ ಬಳಕೆ ಮಾಡಬೇಕು. ನೀರನ್ನು ಪೋಲು ಮಾಡದಂತೆ ಜನರಿಗೆ ಜಾಗೃತಿ ಮೂಡಿಸಲು ಈ ಅಭಿಯಾನ ನೆರವಾಗುತ್ತದೆ ಎಂದರು.

ಈಚೆಗೆ ಮಳೆ ಪ್ರಮಾಣ ಕಡಿಮೆಯಾಗುತ್ತಿದೆ. ಈ ವರ್ಷವೂ ಮಳೆ ಬಾರದೇ ಇರುವದರಿಂದಾಗಿ ಈ ಸಲ ನೀರಿನ ಅಭಾವ ಆಗುವ ಸಾಧ್ಯತೆಯಿದೆ. ಈಗಿನಿಂದಲೇ ನೀರನ್ನು ಸಂರಕ್ಷಣೆ ಮಾಡುವ ಕಡೆಗೆ ಎಲ್ಲರೂ ಗಮನ ಹರಿಸಬೇಕಾಗಿದೆ. ನೀರನ್ನು ಪೋಲಾಗದಂತೆ ಅದನ್ನು ಮಿತವಾಗಿ ಬಳಕೆ ಮಾಡಬೇಕು. ದೀಪಾವಳಿ ಸಮಯದಲ್ಲಿ ನೀರಿನ ಮಹತ್ವದ ಅರಿವು ಮಹಿಳಾ ಸದಸ್ಯರು ಮೂಡಿಸಲಿದ್ದಾರೆ. ಯಾವುದೇ ಕುಟುಂಬಕ್ಕೆ ನೀರಿನ ಸಮಸ್ಯೆ ತಲೆದೂರಿದರೆ ಅದರ ಮೊದಲ ಪರಿಣಾಮ ಮಹಿಳೆಯರ ಮೇಲೆ ಆಗುತ್ತದೆ. ಮಹಿಳೆಯರು ವಿವಿಧ ಚಟುವಟಿಕೆಗಳಿಗಾಗಿ ತನ್ನ ಕುಟುಂಬಕ್ಕೆ ಶುದ್ಧ ನೀರನ್ನು ಒದಗಿಸಲು ಅತಿಹೆಚ್ಚು ಪ್ರಯಾಸ ಪಡಬೇಕಾಗುವ ಪರಿಸ್ಥಿತಿ ಬರಬಹುದು. ಇಂತಹ ಪರಿಸ್ಥಿತಿ ತಲೆದೋರದಂತೆ ಮಹಿಳೆಯರು ಗಮನ ಹರಿಸಿ ನೀರನ್ನು ಮಿತವಾಗಿ ಬಳಕೆ ಮಾಡುವಂತೆ ಜನರಲ್ಲಿ ಜಾಗೃತಿ ಮೂಡಿಸಬೇಕು. ಜನರು ನೀರನ್ನು ಮಿತವಾಗಿ ಬಳಕೆ ಮಾಡುವ ಅಗತ್ಯವಿದೆ ಎಂದರು. ಈ ಸಂದರ್ಭದಲ್ಲಿ ಪುರಸಭೆಯ ವ್ಯವಸ್ಥಾಪಕ ವಿರೇಶ ಹಟ್ಟಿ, ಕೆ.ಕೆ.ಕೊಕಡೆ, ಎಲ್.ಐ.ರಾಂಪೂರ, ಎನ್.ಬಿ.ಬಳವಾಟ ಇದ್ದರು.

## ಮುದ್ದೇಬಿಹಾಳದಲ್ಲಿ ಪುರಸಭೆ ಮತ್ತು ಪೊಲೀಸ್ ಅಧಿಕಾರಿಗಳ ಜಂಟಿ ಕಾರ್ಯಾಚರಣೆ

# ಡಬ್ಬಾ ಅಂಗಡಿಗಳ ತೆರವು, ಸುಗಮ ಸಂಚಾರಕ್ಕೆ ಅನುವು



**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಪಟ್ಟಣದ ಮುಖ್ಯ ರಸ್ತೆಗಳಲ್ಲಿ ಎಲ್ಲಂದರಲ್ಲಿ ರಸ್ತೆಗಳನ್ನು ಅನಧಿಕೃತವಾಗಿ ಅತಿಕ್ರಮಿಸಿ ಡಬ್ಬಾ ಅಂಗಡಿಗಳನ್ನಿಟ್ಟುಕೊಂಡು ವ್ಯಾಪಾರ ನಡೆಸುತ್ತ, ವಾಹನ ಸವಾರರಿಗೆ, ಪಾದಾಚಾರಿಗಳಿಗೆ ದಿನಂಪ್ರತಿ ತೊಂದರೆ ನೀಡುತ್ತಿದ್ದವರ ಮೇಲೆ ಪುರಸಭೆ ಮತ್ತು ಪೊಲೀಸ್ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ಜಂಟಿಯಾಗಿ ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿದರು.

ಈ ಬಗ್ಗೆ ಪುರಸಭೆ ಮುಖ್ಯಾಧಿಕಾರಿ



ಕಳೆದ ಕೆಲವು ದಿನಗಳ ಹಿಂದೆಯೇ ಪಟ್ಟಣದಲ್ಲಿ ರಸ್ತೆಯನ್ನು ಅತಿಕ್ರಮಣ ಮಾಡಿದವರು ಸ್ವಯಂ ಪ್ರೇರಿತರಾಗಿ ತೆರವುಗೊಳಿಸುವಂತೆ ಪ್ರಕಟಣೆಯ ಮೂಲಕ ತಿಳಿಸಿದ್ದು, ಪಟ್ಟಣದ ಆಲಮಟ್ಟಿ, ತಂಗಡಗಿ, ಮುಖ್ಯ ಬಜಾರ ಸೇರಿದಂತೆ ಮತ್ತಿತರ ಕಡೆಗಳಲ್ಲಿ ಕಾರ್ಯಪ್ರವೃತ್ತರಾಗಿ ರಸ್ತೆಯನ್ನು ಅತಿಕ್ರಮಿಸಿ ತಮ್ಮ ಅನುಕೂಲಕ್ಕಾಗಿ ಸ್ವಲ್ಪ ಮಟ್ಟಿಗೆ ಕಟ್ಟಡ ಮಾಡಿಕೊಂಡು ಹಲವಾರು ವರ್ಷಗಳಿಂದ ವ್ಯಾಪಾರ ಮಾಡುತ್ತಿದ್ದವರನ್ನು ಸೇರಿದಂತೆ ಯಾವ ಪ್ರಭಾವಕ್ಕೂ ಒಳಗಾಗದೇ ತಮ್ಮ ದಿಟ್ಟತನ ತೋರಿದರು.

ಈ ವೇಳೆ ಪಿಎಸ್ಐ ಸಂಜೀವ ತಿಪರೆಡ್ಡಿ ಮಾತನಾಡಿ, ಹಲವು ದಿನಗಳಿಂದ ಪ್ರಮುಖ ರಸ್ತೆಗಳಲ್ಲಿ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುವ ಬಗ್ಗೆ ದೂರುಗಳು ಬರುತ್ತಿದ್ದು ಪುರಸಭೆಯವರ ಸಹಕಾರದೊಂದಿಗೆ ಇಂದು ಕಾರ್ಯಾಚರಣೆಗೆ ಇಳಿದಿದ್ದೇವೆ. ಈ ಕಾರ್ಯಾಚರಣೆ ಕೇವಲ ಒಂದೆರಡು ದಿನ ಮಾತ್ರವಲ್ಲ. ನಿರಂತರವಾಗಿರುತ್ತೆ. ಯಾವ ಭಾಗದಲ್ಲಿ ನಾವು ತೆರವುಗೊಳಿಸಿದ್ದೇವೆ ಆ ಭಾಗದಲ್ಲಿ ಮತ್ತೆ ಅತಿಕ್ರಮಣ ನಡೆಸಿದರೆ ಅಂಥವರ ಮೇಲೆ ಮುಲಾಜಿಲ್ಲದೇ ಕೇಸ್ ದಾಖಲಿಸಿಸುತ್ತೇನೆ. ಕೇಸ್ ಮಾಡುವಾಗ ತಮ್ಮ ವ್ಯಕ್ತಿಯ ಮೇಲೆ ಕೇಸ್ ದಾಖಲಿಸದಂತೆ ಒತ್ತಡ ಹೇರಲು ಬರುವ ಪ್ರಭಾವಿಗಳು ಈಗಲೇ ನಿಮ್ಮ ವ್ಯಕ್ತಿಗಳಿಗೆ ತಿಳಿ ಹೇಳಿ. ನಂತರ ನಾನು ಯಾರ ಒತ್ತಡಕ್ಕೂ ಒಳಗಾಗಲ್ಲ ಎಂದು ಖಡಕ್ ಸಂದೇಶವನ್ನು ಕೊಟ್ಟಿದ್ದಾರೆ.

ತೆರವು ಕಾರ್ಯಾಚರಣೆ ಕಾರ್ಯ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಪ್ರಶಂಸೆಗೆ ವ್ಯಕ್ತವಾಗಿದೆ. ಹಲವರು ಇಂತಹ ದಿಟ್ಟ ಅಧಿಕಾರಿಗಳು ನಮ್ಮಲ್ಲಿ ಬಂದಿದ್ದು ಸಂತಸ ಮೂಡಿಸಿದೆ ಎನ್ನುವ ಮಾತುಗಳು ಕೇಳಿಬಂದವು.

ಈ ವೇಳೆ ಪುರಸಭೆ ಮುಖ್ಯಾಧಿಕಾರಿ ಮಲ್ಲಿಕಾರ್ಜುನ ಬಿರಾದಾರ, ಕ್ರೈಂ ಪಿಎಸ್ಐ ಆರ್.ಎಲ್.ಮನ್ನಾಭಾಯಿ, ಪುರಸಭೆಯ ಮಾಂತು ಕಟ್ಟಿಮನಿ, ಜಾವೇದ ನಾಯ್ಕೋಡಿ ಸೇರಿದಂತೆ ಮತ್ತೀತರರು ಇದ್ದರು.

ಅತಿಕ್ರಮಣದ ಬಗ್ಗೆ ಹೆಸರು ಹೇಳಲು ಇಚ್ಛಿಸದ ಪಟ್ಟಣದ ಹಿರಿಯ ಹೋರಾಟಗಾರರೊಬ್ಬರು 'ಉದಯರಶ್ಮಿ'ಯೊಂದಿಗೆ ಮಾತನಾಡಿ, ಪಟ್ಟಣದಲ್ಲಿ ಎಲ್ಲಂದರಲ್ಲಿ ಅನಧೀಕೃತವಾಗಿ ರಸ್ತೆಗಳನ್ನು ಅತಿಕ್ರಮಿಸಿಕೊಂಡು ಇಡೀ ಪಟ್ಟಣದ ಸೌಂದರ್ಯವನ್ನು ಹಾಳು ಮಾಡುತ್ತಿದ್ದಾರೆ. ಬಸವೇಶ್ವರ ವೃತ್ತದಿಂದ ಇಂದಿರಾ ವೃತ್ತದ ವರೆಗಂತೂ ಮಾತಾಡೋ ಹಾಗೆಯೇ ಇಲ್ಲ. ರಸ್ತೆ ಬಿಟ್ಟು ವ್ಯಾಪಾರ ಮಾಡುವಂತೆ ಹೇಳಲು ಹೋದರೆ ನಮ್ಮನ್ನೇ ಹೊಡೆಯಲು ಬರ್ತ್ತಾರೆ. ಬೈಕ್ ಗಳನ್ನು ನಿಲ್ಲಿಸಲೂ ಜಾಗವಿರಲ್ಲ. ಇದಕ್ಕೆಲ್ಲ ಸಂಪೂರ್ಣ ಕಡಿವಾಣ ಹಾಕಬೇಕು. ಆ ರಸ್ತೆಗೆ ಒಂದು ದಿನ ಈ ರಸ್ತೆಗೆ ಒಂದು ದಿನದಂತೆ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಬೇಕು. ಮೊದಲು ರಸ್ತೆಯನ್ನು ಅತಿಕ್ರಮಿಸುವ ವ್ಯಾಪಾರಿಗಳಿಗೆ ಸೂಕ್ತ ಸ್ಥಳಾವಕಾಶ ಕಲ್ಪಿಸಬೇಕು. ಸಂಜೆಯಾಗುತ್ತಿದ್ದಂತೆ ಹಳ್ಳಿಗಳ ವ್ಯಾಪಾರಸ್ಥರು ರಸ್ತೆಯ ಮೇಲೆಯೇ ವ್ಯಾಪಾರಕ್ಕೆ ಮುಂದಾಗ್ತಾರೆ. ಯಾರೊಬ್ಬರನ್ನೂ ಈ ರಸ್ತೆಯಲ್ಲಿ ವ್ಯಾಪಾರ ಮಾಡದಂತೆ ಸೂಕ್ತ ತಾಕೀತು ಮಾಡಬೇಕು. ಅಂದಾಗ ಮಾತ್ರ ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸಾಧ್ಯ ಎಂದರು.

# ನ.9 ರಂದು ಜಲಜಾಗೃತಿ ಮೂಡಿಸುವ ಕಾರ್ಯಕ್ರಮ




**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಮಹಿಳೆಯರಿಗಾಗಿ ನೀರು, ನೀರಿಗಾಗಿ ಮಹಿಳೆಯರು ಪರಿಕಲ್ಪನೆಯಡಿ ಪಟ್ಟಣ ಪಂಚಾಯಿತಿಯ ಡೇ ನಲ್ಮ್ ವಿಭಾಗದಿಂದ ನ.9 ರಂದು ಗುರುವಾರ ವಿಶೇಷ ಕಾರ್ಯಕ್ರಮ ಜರುಗಲಿದೆ.

ಪಟ್ಟಣ ಪಂಚಾಯಿತಿಯ ಆವರಣದಲ್ಲಿ ಗುರುವಾರ ಬೆಳಿಗ್ಗೆ 10 ಘಂಟೆಗೆ ಚಾಲನೆ ನೀಡಿ ನಂತರ ಪಟ್ಟಣದ ಪಂಪ್ ಹೌಸ್ ನಂತರ ಹರನಾಳ ಗ್ರಾಮದ ಬಹುಹಳ್ಳಿ ಕುಡಿಯುವ ನೀರು ಯೋಜನೆಯ ಶುದ್ಧಿಕರಣ ಘಟಕ ನಂತರ ಬಳಗಾನೂರ ಕೆರೆಗೆ ತೆರಳಲಾಗುವುದು.

ಇದು ಜಲಜಾಗೃತಿ ಮೂಡಿಸುವ ವಿಶೇಷ ಕಾರ್ಯಕ್ರಮವಾಗಿದ್ದು, ಮನೆಗಳಿಗೆ ಶುದ್ಧ ಮತ್ತು ಸುರಕ್ಷಿತ ಕುಡಿಯುವ ನೀರು ಪೂರೈಕೆ, ಸಾರ್ವಜನಿಕರು ಉತ್ತಮ ಗುಣಮಟ್ಟದ ನೀರನ್ನು ಪಡೆದುಕೊಳ್ಳಲು ಅನುಸರಿಸುವ ವಿವಿಧ ಪರೀಕ್ಷಾ ಮಾದರಿಯ ಪ್ರಕ್ರಿಯೆಗಳ ಬಗ್ಗೆ ಮಾಹಿತಿಯನ್ನು ತಿಳಿಸುವುದರ ಜೊತೆಗೆ ನೀರಿನ ಮೂಲ ಸೌಕರ್ಯಗಳ ಕುರಿತು ಮಾಲೀಕತ್ವದ ಭಾವನೆಯನ್ನು ಮಹಿಳೆಯರಲ್ಲಿ ತರುವುದಾಗಿದೆ.

ಜಲಜಾಗೃತಿ ಕಾರ್ಯಕ್ರಮದಲ್ಲಿ ಪಟ್ಟಣದ ಬಹುತೇಕ ಮಹಿಳಾ ಸ್ವಸಹಾಯ ಸಂಘದ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಯಶಸ್ವಿಗೊಳಿಸಲಿದ್ದಾರೆ ಎಂದು ಮುಖ್ಯಾಧಿಕಾರಿ ಎಲ್.ಡಿ. ಮುಲ್ಲಾ ತಿಳಿಸಿದ್ದಾರೆ

# ಆನ್‌ಲೈನ್ ಕಲಿಕೆಗೆ ಕಂಪ್ಯೂಟರ್ ತುಂಬಾ ಅವಶ್ಯ

**ಉದಯರಶ್ಮಿ ನ್ಯೂಸ್**




ಹೊನವಾಡ: ನಮ್ಮ ಜೀವನದಲ್ಲಿ ನಮಗೆ ಯಾವುದೇ ಜ್ಞಾನ ಸಿಕ್ಕರೂ ಅದರ ಸದುಪಯೋಗ ಮಾಡಿಕೊಳ್ಳಬೇಕೆ ಹೊರತು ದುರುಪಯೋಗವಲ್ಲ. ಇಂದಿನ ಯುಗದಲ್ಲಿ ಕಂಪ್ಯೂಟರ್ ಶಿಕ್ಷಣ ವಿದ್ಯಾರ್ಥಿಗಳಿಗೆ ಅತ್ಯವಶ್ಯಕವಾಗಿದೆ ಎಂದು ಬಾಬುರಾವ್ ಮಹಾರಾಜ ತಿಳಿಸಿದರು.

ತಿಕೋಟಾ ತಾಲ್ಲೂಕಿನ ಹೊನವಾಡ ಗ್ರಾಮದ ಶ್ರೀ ಬ್ಯಾಳಿ ಬಸವೇಶ್ವರ ದೇವಸ್ಥಾನದಲ್ಲಿ ನಡೆದ ಅಪ್ಪು ಆಕಾಡೆಮಿ ಕಂಪ್ಯೂಟರ್ ತರಬೇತಿ ಕೇಂದ್ರದ ವತಿಯಿಂದ ಸೋಮವಾರ ಕನ್ನಡ ರಾಜ್ಯೋತ್ಸವ ಹಾಗೂ ಪುನೀತ್ ನುಡಿ ನಮನ ಮತ್ತು ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಕೋರ್ಸ್ ಗಳ ಪ್ರಮಾಣ ಪತ್ರ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರೇ ಸಿ ಪಾಟೀಲ್ ಅವರು ಮಾತನಾಡಿ, ಕಂಪ್ಯೂಟರ್ ಶಿಕ್ಷಣ ಎಷ್ಟು ಅವಶ್ಯಕತೆ ಇದೆಯೋ ಅಷ್ಟೇ ಬಳಸಿಕೊಳ್ಳಬೇಕು. ಅನವಶ್ಯಕವಾಗಿ ಬಳಸುವುದರಿಂದ ಮನುಷ್ಯರ ಮೇಲೆ ದುಷ್ಪರಿಣಾಮ ಬೀರುತ್ತವೆ. ಕಂಪ್ಯೂಟರ್ ಶಿಕ್ಷಣ ಅತ್ಯವಶ್ಯಕ, ಅದಕ್ಕಾಗಿ ಎಲ್ಲರೂ ಕಂಪ್ಯೂಟರ್ ಶಿಕ್ಷಣ ಪಡೆದುಕೊಳ್ಳಬೇಕು ಎಂದು ಹೇಳಿದರು.

ನಿಂಗರಾಜ್ ಸಿಂಗಾಡಿ ಮಾತನಾಡಿ, ಕಂಪ್ಯೂಟರ್ ಎನ್ನುವುದು ಇಂಟರ್ನೆಟ್ ಸೌಲಭ್ಯದ ಜೊತೆಗೆ ಮಕ್ಕಳು ಶಿಕ್ಷಣದಲ್ಲಿ ಹೊಸ ಕೌಶಲ್ಯ ಮತ್ತು ಸಾಮಥ-ರ್ಯಗಳನ್ನು ಕಲಿಯಲು ಬಳಸಬಹುದಾದ ಅತ್ಯಂತ ಶಕ್ತಿಶಾಲಿ ಸಾಧನವಾಗಿದೆ. ಕೋವಿಡ್ ಸಂದರ್ಭದಲ್ಲಿ ಆನ್ ಲೈನ್ ಕಲಿಕೆಗೆ ಕಂಪ್ಯೂಟರ್ ತುಂಬಾ ಪ್ರಯೋಜನ ನೀಡಿದೆ. ಕಂಪ್ಯೂಟರ್ ಇರುವ ಕಾರಣದಿಂದಲೇ ದೂರ ಶಿಕ್ಷಣ ಸಾಧ್ಯವಾಗಿದೆ ಎಂದರು.

ತುಳಸಿದಾಸ ಸಾವಂತ ಪ್ರಾಸ್ತಾವಿಕ ಮಾತನಾಡಿದರು.

ವೇದಿಕೆಯ ಮೇಲೆ ನಳಿನಿಕಾಂತ ಸಾವಂತ, ಯಂಕಪ್ಪ ಉಪ್ಪಾರ, ಶಂಕರ ಕಟೆ, ನಾಮದೇವ ಸಾವಂತ, ಮಾಣಿಕ ಶಿಂಧೆ, ಉಮೇಶ್ ಜಾಧವ ಉಪಸ್ಥಿತರಿದ್ದರು.

ಪ್ರಿಯಾ ನಾವಿ ಸಂಗಡಿಗರು ಪ್ರಾರ್ಥಿಸಿದರು. ಶಿವಾನಂದ ಚಾವರ ನಿರೂಪಿಸಿದರು ತುಕಾರಾಮ ನಲವಡೆ ಸ್ವಾಗತಿಸಿದರು. ಸುಕನ್ಯಾ ಪತ್ತಾರ ವಂದಿಸಿದರು.

## ಬಿಜೆಪಿ ರೈತ ಮೋರ್ಚಾ ರಾಜ್ಯ ಕಾರ್ಯದರ್ಶಿ ಸಂಜಯ ಪಾಟೀಲ ಕನಮಡಿ ಆರೋಪ

# ರೈತಪರ ಯೋಜನೆಗಳನ್ನು ರದ್ದು ಮಾಡಿದ ಕಾಂಗ್ರೆಸ್ ಸರ್ಕಾರ

**ಉದಯರಶ್ಮಿ ನ್ಯೂಸ್**

ತಿಕೋಟಾ: ಬಿಜೆಪಿ ಸರ್ಕಾರ ಈ ಹಿಂದೆ ಜಾರಿಗೆ ತಂದ ರೈತ ಪರವಾದ ಯೋಜನೆಗಳಾದ ಕಿಸಾನ್ ಸಮ್ಮಾನ ನಿಧಿ, ರೈತ ವಿದ್ಯಾನಿಧಿ, ಭೂ ಚೇತನ, ಭೂ ಸಿರಿ, ರೈತ ಶಕ್ತಿ, ಕ್ಷೀರ ಸಮೃದ್ಧಿ ಸಹಕಾರ ಬ್ಯಾಂಕ್ ಸೇರಿದಂತೆ ಅನೇಕ ಯೋಜನೆಗಳನ್ನು ಅನುದಾನದ ಕೊರತೆ ಎಂಬ ನೆಪವೊಡ್ಡಿ ಈಗಿರುವ ಕಾಂಗ್ರೆಸ್ ಸರ್ಕಾರ ರದ್ದು ಮಾಡಿದೆ ಎಂದು ರಾಜ್ಯ ರೈತ ಮೋರ್ಚಾ ಕಾರ್ಯದರ್ಶಿ ಸಂಜಯ ಪಾಟೀಲ ಕನಮಡಿ ಹೇಳಿದರು.

ಪಟ್ಟಣದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬರಗಾಲ ಅನಿಯಮಿತ ವಿದ್ಯುತ್ ಲೋಡ್ ಶೆಡ್ಡಿಂಗ್‌ನಿಂದ ಕಂಗಾಲದ ರೈತರ ಗಾಯದ ಮೇಲೆ ಬರೆ ಎಳೆದ ಕಾಂಗ್ರೆಸ್ ಸರ್ಕಾರ ಇನ್ನು ಮುಂದೆ ರೈತರ ಪಂಪ್ ಸೆಟ್ ಗಳಿಗೆ ವಿದ್ಯುತ್ ಪಡೆಯಬೇಕಾದರೇ ಸ್ವಂತ ಖರ್ಚಿನಲ್ಲಿ ಟ್ರಾನ್ಸ್‌ಫಾರ್ಮರ್, ಕಂಬ ಮತ್ತು ತಂತಿ ಸೇರಿದಂತೆ ವಿದ್ಯುತ್‌ಗೆ ಸಂಬಂಧಪಟ್ಟ ವಸ್ತುಗಳನ್ನು ರೈತರೇ ಖರೀದಿಸಬೇಕೆಂದು ಸರ್ಕಾರ ಆದೇಶ ಮಾಡಿದ್ದು, ಇದು ಅತ್ಯಂತ ಖಂಡನೀಯವಾಗಿದೆ. ಈ ಹಿಂದೆ ಪ್ರತಿ ನೀರಾವರಿ ಪಂಪಸೆಟ್‌ಗಳಿಗೆ ಕೇವಲ 24 ಸಾವಿರ ಶುಲ್ಕ ನಿಗದಿಯಾಗಿತ್ತು. ಸರ್ಕಾರದ ಈ ಆದೇಶದಿಂದ ಕನಿಷ್ಠ ₹ 2 ಲಕ್ಷ ನೀಡಿ ವಿದ್ಯುತ್ ಸಂಪರ್ಕ ಪಡೆಯಬೇಕಾದ ಅನಿವಾರ್ಯತೆಗೆ ರೈತರಿಗೆ ಎದುರಾಗಿದೆ ಎಂದರು.



ಮಳೆಯ ಅಭಾವದಿಂದ ರಾಜ್ಯದಲ್ಲಿ ಸಂಪೂರ್ಣ ಬರಗಾಲ ಆವರಿಸಿದ್ದು, ಮುಂಗಾರು ಬೆಳೆ ಸಂಪೂರ್ಣ ನಾಶವಾಗಿವೆ. ಸರ್ಕಾರದ ವರದಿಯ ಪ್ರಕಾರ ರಾಜ್ಯದಲ್ಲಿ 223 ತಾಲ್ಲೂಕುಗಳು ಸಂಪೂರ್ಣ ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಸುಮಾರು 200 ಕ್ಕಿಂತಲೂ ಹೆಚ್ಚು ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿದ್ದು, ಇದು ದುರ್ದೈವದ ಮತ್ತು ಅತ್ಯಂತ ಕಳವಳಕಾರಿ ಸಂಗತಿಯಾಗಿದೆ.

ರಾಜ್ಯದಲ್ಲಿ ಅಳಿದುಳಿದ ಬೆಳೆಗಳನ್ನು ಉಳಿಸಿಕೊಳ್ಳಲಿಕ್ಕೆ ರೈತರು ತೆರದ ಬಾವಿ, ಕೊಳವೆ ಬಾವಿಗಳ ಮೋರೆ ಹೋಗಿದ್ದಾರೆ. ಆದರೆ ಹಗಲು ಹೊತ್ತಿನಲ್ಲಿ ವಿದ್ಯುತ್ ಪೂರೈಕೆಯಾಗಲಾರದೇ ಅನಿಯಮಿತ ಲೋಡ್ ಶೆಡ್ಡಿಂಗ್ ಹೊಡೆತಕ್ಕೆ ರೈತರು ಬಸವಳಿದು ಹೋಗುವಂತಾಗಿದೆ. ವಿದ್ಯುತ್ ಆಭಾವ, ರೈತರ ಆತ್ಮಹತ್ಯೆ ಹಾಗೂ ಬರ ಪೀಡಿತ ಪ್ರದೇಶದ ರೈತರ ಸಹಾಯಕ್ಕೆ ಬರಬೇಕಾದ ಸರ್ಕಾರ ಮತ್ತು ಉಸ್ತುವಾರಿ ಮಂತ್ರಿಗಳು ಯಾವುದೇ ಜಿಲ್ಲೆಗಳಿಗೆ ಭೇಟಿ ನೀಡಿಲ್ಲ ರೈತರಿಗೆ ಧೈರ್ಯ ತುಂಬುವ ಕೆಲಸ ಮಾಡಿಲ್ಲ.

ಹೀಗಾಗಿ ರೈತನ ಬದುಕು ಅತ್ಯಂತ ಅಸಹನಿಯವಾಗಿದೆ. ರೈತರ ಕೃಷಿ ಪಂಪಸೆಟ್‌ಗಳಿಗೆ ಸ್ವಂತ ಖರ್ಚಿನಲ್ಲಿಯೇ ಹೊಸ ಸಂಪರ್ಕ ಪಡೆಯುವ ಆದೇಶವನ್ನು ಸರ್ಕಾರ ರದ್ದುಗೊಳಿಸಿ, ಈ ಹಿಂದಿನಂತೆಯೇ ವಿದ್ಯುತ್ ಸಂಪರ್ಕ ನೀಡಬೇಕಾಗಿ ಸರ್ಕಾರವನ್ನು ಕರ್ನಾಟಕ ಬಿಜೆಪಿ ರೈತ ಮೋರ್ಚಾ ಒತ್ತಾಯಿಸುತ್ತದೆ. ಒಂದು ವೇಳೆ ಈ ಆದೇಶವನ್ನು ಹಿಂಪಡೆಯದಿದ್ದರೇ ರಾಜ್ಯದ ಸುಮಾರು 35 ಲಕ್ಷ ಪಂಪಸೆಟ್‌ಗಳ ರೈತ ಬಳಕೆದಾರರೊಂದಿಗೆ ಬಿಜೆಪಿ ರೈತ ಮೋರ್ಚಾ ಬೀದಿಗಿಳಿದು ಹೋರಾಟ ಮಾಡುವುದು ಅನಿವಾರ್ಯವಾಗಲಿದೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡ ವಿಜುಗೌಡ ಎಸ್.ಪಾಟೀಲ, ಮಾಜಿ ಜಿಲ್ಲಾ ಪಂಚಾಯತಿ ಅಧ್ಯಕ್ಷ ಉಮೇಶ ಕೋಳಕೂರ, ಈರಣ್ಣ ಶಿರಮಗೊಂಡ, ಪ್ರಶಾಂತ ಕಕಮರಿ, ರಾಜೇಂದ್ರ ಕುಲಕರ್ಣಿ, ವಾಮನ್ ಸೊಂಡುರ, ಬಸಲಿಂಗ ಜಂಗಮಶೆಟ್ಟಿ, ಮಲ್ಲಿಕಾರ್ಜುನ ತುಳಜನವರ, ರಮೇಶ ಮರೇಬಾಗಿ, ಗಿರೀಶ ಕುಲಕರ್ಣಿ, ಮಾನಿಂಗ ಮಂಟೂರ, ಶ್ರೀಶೈಲ ಬೂಸಗೊಂಡ, ಸಿದ್ದು ಪೂಜಾರಿ ಇದ್ದರು.ಛ6

# ಕಾಲುವೆ ನೀರು ತಡೆಹಿಡಿದವರ ಮೇಲೆ ಕ್ರಮಕ್ಕೆ ಆಗ್ರಹ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ತಾಲೂಕಿನ ಮಲಗದಿನ್ನಿ ಕೆರೆ ತುಂಬುವಂತೆ ಮತ್ತು ಕೆರೆಗೆ ಕಾಲುವೆ ಮೂಲಕ ಬರುವ ನೀರನ್ನು ತಡೆಹಿಡಿದಿದವರ ಮೇಲೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಯುವಜನಸೇನೆಯ ಪದಾಧಿಕಾರಿಗಳು ಕೆಬಿಜೆಎನ್ಎಲ್ ನ ಎಎಲ್‌ಬಿಸಿಯ ಇಇ ರಾಮನಗೌಡ ಹಳ್ಳೂರ ಮತ್ತು ತಹಶೀಲ್ದಾರಗೆ ಮನವಿ ಪತ್ರ ಸಲ್ಲಿಸಿದರು.



ಈ ವೇಳೆ ಸಂಘಟನೆಯ ತಾಲೂಕು ಸಂಚಾಲಕ ಮುತ್ತು ಟಕ್ಕಳಕಿ ಮಾತನಾಡಿ, ಕೆರೆ ತುಂಬುವ ಯೋಜನೆಯಡಿ ಮಲಗಲದಿನ್ನಿ ಕೆರೆಗೆ ವರ್ಷದಲ್ಲಿ ನಾಲ್ಕು ತಿಂಗಳು ನೀರು ಹರಿಸಬೇಕೆನ್ನುವ ನಿಯಮ ಇದೆ. ಆದರೆ ಈ ನಿಯಮ ಪಾಲನೆಯಾಗುತ್ತಿಲ್ಲ. ಕಾಲುವೆ ಮೂಲಕ ನೀರು ತುಂಬಿದರೂ ಕೆರೆಗ ಸೇರುತ್ತಿಲ್ಲ. ಕವಡಿಮಟ್ಟಿ ಮಾರ್ಗವಾಗಿ ಹಾಯ್ದು ಹೋಗಿರುವ ಮುಖ್ಯ ಕಾಲುವೆ ಮುಂದೆ ಮಲಗಲದಿನ್ನಿ ಕೆರೆಗೆ ಸೇರುತ್ತದೆ. ಕಾಲುವೆಯ ನೀರನ್ನು ಕೆಲವು ಪಟ್ಟಭದ್ರ ಹಿತಾಸಕ್ತಿಗಳು ತಡೆದಿದ್ದು ಮುಂದೆ ನೀರು ಬಾರದೇ ಇತ್ತ ಕೆರೆಯೂ ಸೇರದೇ ಪಟ್ಟಭದ್ರರಿಗೆ ಮಾತ್ರ ಉಪಯೋಗವಾಗುತ್ತಿದೆ. ಹಲವು ರೈತರು ಸೇರಿ ನೀರನ್ನು ತಡೆಹಿಡಿಯದಂತೆ ಮನವಿ ಮಾಡಲು ಹೋದಾಗ ಹಲ್ಲೆಗೆ ಮುಂದಾಗುತ್ತಾರೆ. ನೀರನ್ನು ತಡೆಹಿಡಿಯುವುದು ಸಂಪೂರ್ಣ ಕಾನೂನು ಬಾಹಿರವಾಗಿದ್ದು ತಪ್ಪಿತಸ್ಥರ ಮೇಲೆ ಕೂಡಲೇ ಕೆಬಿಜೆಎನ್ಎಲ್ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಬುಧವಾರದಿಂದ ತಾಲೂಕಿನ ಅಡವಿ ಸೋಮನಾಳ ಕ್ರಾಸ್ ಬಳಿ ಧರಣಿ ಸತ್ಯಾಗ್ರಹ ನಡೆಸುವುದಾಗಿ ಎಚ್ಚ–ರಿಸಿದರು.

ಈ ಕಾಲುವೆಯ ನೀರು ಸುಮಾರು 40 ಹಳ್ಳಿಗಳಿಗೆ ಮತ್ತು 2 ಕೆರೆಗಳಿಗೆ ಉಪಯೋಗವಾಗುವ ಕಾಲುವೆ ಇದ್ದು, ಮಲಗಲದಿನ್ನಿ ಗ್ರಾಮಸ್ಥರು ಈ ಕೆರೆಯ ನಿರ್ಮಾಣಕ್ಕೆ ಸುಮಾರು 150 ಎಕರ ಕೃಷಿ ಭೂಮಿಯನ್ನು ಕಳೆದುಕೊಂಡಿದ್ದಾರೆ. ಸುಮಾರು 300 ಎಕರೆ ಹೊಲಗಳಿಗೆ ಮತ್ತು ದನಕರುಗಳಿಗೆ ಇದೇ ಕೆರೆಯ ನೀರು ಅತೀ ಅವಶ್ಯಕವಾಗಿದೆ. ಆದರೆ ಅರೇಮುರಾಳ ಗ್ರಾಮದ ನಿವಾಸಿಗಳಾದ ಬಸಪ್ಪ ಸಾಬಣ್ಣ ವಗ್ಗರ, ಕಾಂತು ಬಸಪ್ಪ ವಗ್ಗರ, ಮುತ್ತು ಬಸಪ್ಪ ವಗ್ಗರ ಈ ಮೂವರು ಸೇರಿಕೊಂಡು ಈ ಕಾಲುವೆಗೆ ಅಡ್ಡಲಾಗಿ ಸಂಪೂರ್ಣವಾಗಿ ಕಲ್ಲುಗಳನ್ನು ಕಾಲುವೆಯಲ್ಲಿ ಅಡ್ಡಗಟ್ಟಿ ಮುಂದೆ ಯಾವ ಒಬ್ಬ ರೈತನಿಗೂ ನೀರು ಹೋಗದ ರೀತಿಯಲ್ಲಿ ಕಾಲುವೆಯನ್ನು ಸಂಪೂರ್ಣವಾಗಿ ಬಂದ್ ಮಾಡಿರುತ್ತಾರೆ. ಬೂದಿಹಾಳ, ಜಂಗಮುರಾಳ, ಮಾವಿನಭಾವಿ, ಚವನಭಾವಿ, ಮಲಗಲದಿನ್ನಿ, ಬೂದಿಹಾಳ ಕೆರೆ ಇನ್ನೂ ಮುಂತಾದ ಗ್ರಾಮಗಳಿಗೆ ಇದೇ ಕಾಲುವೆಯ ಮಾರ್ಗವಾಗಿ ನೀರು ಹೋಗಬೇಕು. ಇದನ್ನು ಇವರು ಸಂಪೂರ್ಣವಾಗಿ ಬಂದ್ ಮಾಡಿರುವದರಿಂದ ರೈತರ ಹೊಲಗಳಿಗೆ ನೀರು ಬರುತ್ತಿಲ್ಲ. ಕಲ್ಲುಗಳನ್ನು ತೆರವುಗೊಳಿಸುವಂತೆ ಹೇಳಲು ಹೋದರೆ ರೈತರ ಮೇಲೆ ಹಲ್ಲೆ, ದಬ್ಬಾಳಿಕೆ, ಜಗಳ, ಅವಾಚ್ಯ ಶಬ್ದಗಳಿಂದ ನಿಂದಿಸುವುದನ್ನು ಮಾಡುತ್ತಾರೆ. ಹಾಗಾಗಿ ಕೆಬಿಜೆಎನ್–ಎಲ್ ಅಧಿಕಾರಿಗಳು ಹಾಗೂ ಪೊಲೀಸ್ ಇಲಾಖೆಯವರು ಇವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮನವಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ಸಂಘಟನೆಯ ಅಬ್ದುಲ ಡೋಣೂರ, ಹುಲಗಪ್ಪ ಹೊಸಮನಿ, ಚೇತನ ಚಿನ್ನಾಪೂರ, ಮಲ್ಲನಗೌಡ ಪಾಟೀಲ, ರೇವಣಸಿದ್ದ ಮೇಟಿ, ಅಶೋಕ ಉಂಡಿ, ಶಿವು ನಾಡಗೌಡ ಸೇರಿದಂತೆ ಮತ್ತಿತರರು ಇದ್ದರು.

## ನೀರು ಪೋಲು ಮಾಡದೆ ಕೆಬಿಜೆಎನ್ನೆಲ್ ಅಧಿಕಾರಿಗಳೊಂದಿಗೆ ಸಹಕರಿಸಲು ಮನವಿ

# ಕೃಷ್ಣಾ ಮೇಲ್ದಂಡೆ ಯೋಜನೆ ನೀರಾವರಿ ಸಲಹಾ ಸಮಿತಿ ಸಭೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ನೀರಾವರಿ ಬಳಕೆಗಾಗಿ ಲಭ್ಯವಾಗಬಹುದಾದ ನೀರಿನ ಪ್ರಮಾಣ ಕೇವಲ 5 ಟಿ.ಎಂ.ಸಿ. ಮಾತ್ರ ಇದ್ದು, ಲಭ್ಯವಾಗುವ ನೀರಿನ ಪ್ರಮಾಣವು ಸಹ ಭಾಷ್ಪಿಕರಣಗೊಳ್ಳುವ ಸಂಭವನೀಯತೆ ಇರುವುದರಿಂದ ಅಗತ್ಯವಿರುವ 75 ಟಿಎಂಸಿ ನೀರು ಲಭ್ಯವಿಲ್ಲದೇ ಇರುವುದರಿಂದ 2023–24ನೇ ಸಾಲಿನ ಹಿಂಗಾರು ಹಂಗಾಮಿಗೆ ಕಾಲುವೆ ಜಾಲಕ್ಕೆ ನೀರು ಪೂರೈಸಲು ಸಾಧ್ಯವಾಗುವುದಿಲ್ಲವೆಂದು ಸಮಿತಿ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಗಿದೆ.

ಸಧ್ಯ ಚಾಲ್ತಿಯಲ್ಲಿರುವ ವೇಳಾಪಟ್ಟಿಯಂತೆ ದಿನಾಂಕ : 18–11–2023ರ ವರೆಗೆ ಕಾಲುವೆ ಜಾಲಕ್ಕೆ ನೀರು ಪೂರೈಸುವುದನ್ನು ಚಾಲ್ತಿಯಲ್ಲಿಡಲಾಗುವುದು. ತದನಂತರ, ದಿನಾಂಕ : 19–11–2023 ರಿಂದ 26–11–2023ರವರೆಗೆ 8 ದಿನ ಕಾಲುವೆ ಜಾಲಕ್ಕೆ ನೀರು ಪೂರೈಸುವುದನ್ನು ಸ್ಥಗಿತಗೊಳಿಸಲಾಗುವುದು. ತದನಂತರ, ದಿನಾಂಕ : 27–11–2023 ರಿಂದ 04–12–2023ರವರೆಗೆ 8 ದಿನಗಳಿಗೆ ಕಾಲುವೆ ಜಾಲಗಳಿಗೆ ನೀರು ಪೂರೈಸುವುದನ್ನು ಮಿತವ್ಯಯ ಸಾಧಿಸಿ ಕೊನೆಯ ಅಂಚಿನವರೆಗೆ ನೀರು ಪೂರೈಸಲು ಅನುಕೂಲವಾಗುವಂತೆ ಹೆಚ್ಚುವರಿ ದಿನಗಳಿಗೆ ವಿಸ್ತರಿಸಲು ಸಭೆಯಲ್ಲಿ ನಿರ್ಣಯಿಸಲಾಯಿತು.

ಇಂತಹ ಸಂಕಷ್ಟದ ಸಮಯದಲ್ಲಿ ರೈತರು ನೀರು ಪೋಲು ಮಾಡದೆ ಕೃಷ್ಣಾಭಾಗ್ಯ ಜಲ ನಿಗಮದ ಅಧಿಕಾರಿಗಳೊಂದಿಗೆ ಸಹಕರಿಸಲು ವಿನಂತಿಸಲಾಯಿತು.

ಹಿಂಗಾರು ಹಂಗಾಮಿಗೆ 2023–24ನೇ ಸಾಲಿನಲ್ಲಿ ಆಲಮಟ್ಟಿ ಜಲಾಶಯಕ್ಕೆ ಒಳಹರಿವು ದಿನಾಂಕ: 14–08–2023ರಂದು ಕ್ಷೀಣವಾಗಿದ್ದು, ದಿನಾಂಕ : 13–10–2023ರಂದು ಸಂಪೂರ್ಣವಾಗಿ ಸ್ಥಗಿತವಾಗಿದೆ. ದಿನಾಂಕ : 05–12–2023 ರಂದು ಆಲಮಟ್ಟಿ ಜಲಾಶಯದ ಮಟ್ಟವೂ ಅಂದಾಜು 513 ಮೀಟ–




ರ್‌ಗೆ ಬರಬಹುದಾಗಿದೆ. ಅಂದು ಒಟ್ಟು ಸಂಗ್ರಹಣೆ 50 ಟಿ.ಎಂ.ಸಿ. ಆಗಬಹುದಾಗಿದ್ದು, ಇದರಲ್ಲಿ ಜೀವಜಲ 32 ಟಿಎಂಸಿ ಹಾಗೂ ನಾರಾಯಣಪುರ ಜಲಾಶಯದ ಜೀವಜಲ 12 ಟಿಎಂಸಿ ಒಟ್ಟು 44 ಟಿಎಂಸಿ ಜೀವಜಲ ಲಭ್ಯವಾಗಬಹುದಾಗಿದ್ದು,ಡಿ. 5 ರಿಂದ ಜೂನ್ 30.2024ರ ವರೆಗೆ ಕುಡಿಯುವ ನೀರು, ಕೆರೆಗಳನ್ನು ತುಂಬಿಸುವುದು, ಕಾಲುವೆಗಳ ಮುಖಾಂತರ ಕುಡಿಯುವ ನೀರಿನ ಯೋಜನೆಗಳಿಗೆ ನೀರು ಪೂರೈಸುವುದು, ಮತ್ತು ಉಷ್ಣ ವಿದ್ಯುತ್ ಸ್ಥಾವರಗಳಿಗೆ ಹಾಗೂ ಕೈಗಾರಿಕೆಗಳಿಗೆ, ಬ್ಯಾರೇಜ್‌ಗಳಲ್ಲಿ ನೀರಿನ ಸಂಗ್ರಹಣೆ, ರೈತರ ಹಿನ್ನೀರಿನ ಬಳಕೆ ಸೇರಿದಂತೆ ಈ ಮೊದಲು ಕಾಯ್ದಿರಿಸಿಕೊಂಡ 37,25 ಟಿ.ಎಂ.ಸಿ. ಬದಲಾಗಿ ಸಭೆಯಲ್ಲಿ ಚರ್ಚಿಸಿ ಅಂ–ದಾಜು 40.00 ಟಿ.ಎಂ.ಸಿ. ನೀರನ್ನು ಕಾಯ್ದಿರಿಸಲು ನಿರ್ಧರಿಸಲಾಯಿತು.

ಸಭೆಯಲ್ಲಿ ಸಂಸದ ರಮೇಶ ಜಿಗಜಿಣಗಿ, ಅವಳಿ ಜಿಲ್ಲೆಯ ಶಾಸಕರುಗಳಾದ ಸಿ.ಎಸ್.ನಾಡಗೌಡ, ಜೆ.ಟಿ.ಪಾಟೀಲ, ಪಿ.ಎಚ್.ಪೂಜಾರ, ಅಶೋಕ ಮನಗೂಳಿ, ವಿಠ್ಠಲ ಕಟಕದೊಂಡ, ಯಶವಂತರಾಯಗೌ ಪಾಟೀಲ, ವಿಜಯಾನಂದ ಕಾಶಪ್ಪನವರ, ಹಣಮಂತ ನಿರಾಣಿ, ಜಗದೀಶ ಗುಡಗಂಟಿ, ರಾಜಾ ವೆಂಕಟಪ್ಪ ನಾಯಕ, ಶ್ರೀಮತಿ ಕರಿಯಮ್ಮ ನಾಯಕ್, ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್, ಬಾಗಲಕೋಟೆ ಜಿಲ್ಲಾಧಿಕಾರಿ ಜಾನಕಿ, ಕೆಬಿಜೆಎನ್ಎಲ್ ವ್ಯವಸ್ಥಾಪಕ ನಿರ್ದೇಶಕ ರಾಜೇಶ ಅಮ್ಮೀನಭಾವಿ, ಭೀಮರಾಯನಗುಡಿ ಕಾಡಾ ಆಡಳಿತಾಧಿಕಾರಿ ಮುಕ್ಕಣ್ಣ ನಾಯಕ್, ಆಲಮಟ್ಟಿ ಆಣೆಕಟ್ಟು ಮುಖ್ಯ ಅಭಿಯಂತರ ಎಚ್.ಎನ್.ಶ್ರೀನಿವಾಸ, ನಾರಾಯಣಪುರ ಮುಖ್ಯ ಅಭಿಯಂತರ ಮಂಜುನಾಥ್, ಸದಸ್ಯ ಕಾರ್ಯದರ್ಶಿಗಳೂ ಹಾಗೂ ಮುಖ್ಯ ಅಭಿಯಂತರ ಭೀಮರಾಯನಗುಡಿ ಪ್ರೇಮಸಿಂಗ್, ಆಲಮಟ್ಟಿ ಅಧೀಕ್ಷಕ ಅಭಿಯಂತರ ಬಿ.ಬಸವರಾಜ್ ಉಪಸ್ಥಿತರಿದ್ದರು.

ತೀರ್ಮಾನಿಸಲಾಯಿತು.

ಮಂಗಳವಾರ ಆಲಮಟ್ಟಿಯಲ್ಲಿ ಅಬಕಾರಿ ಖಾತೆ ಸಚಿವರೂ ಆದ ಕೃಷ್ಣಾ ಮೇಲ್ದಂಡೆ ಯೋಜನೆ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರಾದ ಆರ್.ಬಿ.ತಿಮ್ಮಾಪುರ ಅವರ ಅಧ್ಯಕ್ಷತೆಯಲ್ಲಿ ಜರುಗಿದ 2023–24ನೇ ಸಾಲಿನ ಹಿಂಗಾರು ಹಂಗಾಮಿನ ನೀರಾವರಿ ಸಲಹಾ

# ನ.9ರಂದು ಲೋಕಾಯುಕ್ತ ಅಧಿಕಾರಿಗಳಿಂದ ದೂರು ಸ್ವೀಕಾರ

**ಉದಯರಶ್ಮಿ ನ್ಯೂಸ್**

ವಿಜಯಪುರ: ಲೋಕಾಯುಕ್ತ ಪೊಲೀಸ್ ಅಧಿಕಾರಿಗಳಿಂದ ನವೆಂಬರ್ 9 ರಂದು ಜಿಲ್ಲೆಯ ದೇವರ ಹಿಪ್ಪರಗಿ ತಾಲೂಕಾ ಕೇಂದ್ರದಲ್ಲಿ ಸಾರ್ವಜನಿಕರ ಅಹವಾಲು ಸ್ವೀಕಾರ ಕಾರ್ಯಕ್ರಮ ನಡೆಯಲಿದೆ.

ಅಂದು ಬೆಳಿಗ್ಗೆ 10–30 ಗಂಟೆಯಿಂದ ಪೋಲಿಸ್ ಅಧೀಕ್ಷಕರು (ಮೊ:9364062528), ಪೊಲೀಸ್ ಉಪಾಧೀಕ್ಷಕರು (ಮೊ:9364062557), ಪೊಲೀಸ್ ಇನ್ಸಪೆಕ್ಟರ್–1 (ಮೊ:9364062640), ಪೊಲೀಸ್ ಇನ್ಸಪೆಕ್ಟರ್–2(ಮೊ:9364062639) ದೇವರ ಹಿಪ್ಪರಗಿಯ ಶ್ರೀ ಶ್ರೀ ಶ್ರೀ 1008 ಜಗದ್ಗುರು ಪಂಚಾಚಾರ್ಯ ಕಲ್ಯಾಣ ಮಂಟಪದಲ್ಲಿ ಲೋಕಾಯುಕ್ತ ಕಾಯ್ದೆ ಮತ್ತು ಭ್ರಷ್ಟಾಚಾರ ನಿಯಂತ್ರಣ ಕಾಯ್ದೆಯಡಿಯಲ್ಲಿ ಸಾರ್ವಜನಿಕರಿಂದ ಭರ್ತಿ ಮಾಡಿದ ಮತ್ತು ನೋಟ–ರಿಯಿಂದ ಅಫಿಡವಿಟ್ ಮಾಡಿಸಿದ ಅರ್ಜಿಗಳನ್ನು ಸ್ವೀಕರಿಸಲಿದ್ದಾರೆ.

ಸರ್ಕಾರಿ ಕಚೇರಿಗಳಲ್ಲಿ ಅಧಿಕೃತವಾಗಿ ಕೆಲಸಗಳನ್ನು ಮಾಡಿಕೊಡುವಲ್ಲಿ ವಿಳಂಬ ಹಾಗೂ ಲಂಚದ ಬೇಡಿಕೆ, ಇನ್ನಿತರೆ ತೊಂದರೆ ನೀಡುತ್ತಿರುವ ಅಧಿಕಾರಿ–ನೌಕರರ ವಿರುದ್ಧ ಸಾರ್ವಜನಿಕರು ದೂರುಗಳನ್ನು ನೀಡಬಹುದಾಗಿದ್ದು, ಸ್ಥಳದಲ್ಲಿ ಪರಿಹಾರ ಕಂಡುಕೊಳ್ಳಬಹುದಾದ ದೂರುಗಳನ್ನು ಸ್ಥಳೀಯ ಅಧಿಕಾರಿಗಳ ಸಹಕಾರದೊಂದಿಗೆ ಇತ್ಯರ್ಥಪಡಿಸಲು ಪ್ರಯತ್ನಿಸಲಾಗುವುದು. ಸರ್ಕಾರಿ ಅಧಿಕಾರಿಗಳ ಅಕ್ರಮ ಆಸ್ತಿ ಸಂಪಾದನೆ ಸರಕಾರಿ ಹಣದ ದುರುಪಯೋಗ, ಕಳಪೆ ಕಾಮಗಾರಿ ಹಾಗೂ ಇತರೆ ಯಾವುದೇ ರೀತಿಯ ಭ್ರಷ್ಟಾಚಾರ ದೂರುಗಳಿದ್ದಲ್ಲಿ ಹೆಚ್ಚಿನ ಮಾಹಿತಿಗಾಗಿ ಲೋಕಾಯುಕ್ತ ಕಚೇರಿ ದೂರವಾಣಿ 08352–255333, 257786 ಹಾಗೂ 295074 ಸಂಖ್ಯೆಗೆ ಸಂಪರ್ಕಿಸುವಂತೆ ಕರ್ನಾಟಕ ಲೋಕಾಯುಕ್ತ ವಿಜಯಪುರ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.


# ನ.8ರಿಂದ 10ರವರೆಗೆ ಛಾಯಾಚಿತ್ರ ಪ್ರದರ್ಶನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಭಾರತ ಸರ್ಕಾರ, ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಕೇಂದ್ರ ಸಂವಹನ ಇಲಾಖೆ, ವಿಜಯಪುರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ನೆಹರು ಯುವ ಕೇಂದ್ರ, ವಿಜಯಪುರ ಇವರುಗಳ ಸಹಯೋಗದಲ್ಲಿ ನಗರದ ಪಿ ಡಿ ಜೆ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ನವೆಂಬರ್ 08 ರಿಂದ 10ರವರೆಗೆ ಸ್ವಚ್ಛ ಭಾರತ, ಏಕ ಭಾರತ ಶ್ರೇಷ್ಠ ಭಾರತ, ಪ್ರಧಾನ ಮಂತ್ರಿ ವಿಶ್ವಕರ್ಮ ಯೋಜನೆ, ಕೇಂದ್ರ ಸರ್ಕಾರದ ಯೋಜನೆಗಳು, ಪ್ರಧಾನಮಂತ್ರಿಯವರ ದೂರದರ್ಶಿತ್ವ–2047, ವೋಕಲ್ ಪಾರ್ ಲೋಕಲ್ ಹಾಗೂ ಇತರೆ ಯೋಜನೆಗಳ ಕುರಿತ ಛಾಯಾಚಿತ್ರ ಪ್ರದರ್ಶನ ಮತ್ತು ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಉದ್ಘಾಟನಾ ಕಾರ್ಯಕ್ರಮವನ್ನು ನವೆಂಬರ್ 8ರಂದು ಬೆಳಗ್ಗೆ 10:30ಕ್ಕೆ ಏರ್ಪಡಿಸಲಾಗಿದೆ. ವಿಜಯಪುರ ಸಂಸದರಾದ ರಮೇಶ್ ಜಿಗಜಿಣಗಿ ಅವರು ಕರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಭಾಗವಹಿಸಲಿದ್ದು, ವಿವಿಧ ಅಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಹೃದಯ ರೋಗಕ್ಕೆ ಅಲಕ್ಷ್ಯ ಬೇಡ :ಡಾ.ಗೌತಮ ವಗ್ಗರ



**ಉದಯರಶ್ಮಿ ನ್ಯೂಸ್**

ಸಿಂದಗಿ: ಹೃದಯಕ್ಕೆ ರಕ್ತದ ಹರಿವು ಕಡಿಮೆಯಾದಾಗ ಅಥವಾ ಕೊನೆಗೊಂಡಾಗ ಹೃದಯಾಘಾತ ಸಂಭವಿಸುತ್ತದೆ ಎಂದು ಹೃದಯ ರೋಗ ತಜ್ಞ ಡಾ.ಗೌತಮ ವಗ್ಗರ ಹೇಳಿದರು.

ತಾಲೂಕಿನ ಚಿಕ್ಕಸಿಂದಗಿ ಗ್ರಾಮದಲ್ಲಿ ಶ್ರೀ ಸದ್ಗುರು ವೀರೇಶ್ವರ ಮಹಾ ಶಿವಯೋಗಿಗಳ 83 ನೇ ಪುಣ್ಯಸ್ಮರಣೋತ್ಸವದ ಹಾಗೂ ಜಾತ್ರಾ ಮಹೋತ್ಸವದ ನಿಮಿತ್ಯ ಎಮ್ಮಿಗನೂರು ಜಡೆಸಿದ್ದೇಶ್ವರ ಮಹಾ ಶಿವಯೋಗಿಗಳ ಪ್ರವಚನದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಹೃದಯಕ್ಕೆ ಆಮ್ಲಜನಕ–ಸಮೃದ್ಧ ರಕ್ತದ ಕೊರತೆಯು ಪೀಡಿತ ಪ್ರದೇಶಕ್ಕೆ ಹಾನಿಯನ್ನು ಉಂಟುಮಾಡಬಹುದು. ಪರಿಣಾಮವಾಗಿ, ಹೃದಯ ಸ್ನಾಯು ಕ್ಷೀಣಿಸಲು ಪ್ರಾರಂಭಿಸುತ್ತದೆ.

ನಿಮ್ಮ ಹೃದಯವು ಸರಿಯಾಗಿ ಕಾರ್ಯನಿರ್ವಹಿಸಲು ಅಗತ್ಯವಿರುವ ರಕ್ತ ಮತ್ತು ಆಮ್ಲಜನಕವನ್ನು ಪಡೆಯದಿದ್ದರೆ, ನೀವು ಹೃದಯ ವೈಫಲ್ಯ ಮತ್ತು ಇತರ ಹಾನಿಕಾರಕ ಪರಿಣಾಮಗಳನ್ನು ಪಡೆಯುವ ಸಾಧ್ಯತೆ ಹೆಚ್ಚು.

ಹೃದಯಾಘಾತವು ನಿಮ್ಮ ಜೀವಕ್ಕೆ ಅಪಾಯವನ್ನುಂಟುಮಾಡುವ ತೀವ್ರವಾದ ವೈದ್ಯಕೀಯ ತುರ್ತುಸ್ಥಿತಿಯಾಗಿದೆ. ನಿಮ್ಮ ಹೃದಯದ ರಕ್ತದ ಹರಿವನ್ನು ಸಹಜ ಸ್ಥಿತಿಗೆ ತರಲು ನೀವು ಎಷ್ಟು ಬೇಗನೆ ಚಿಕಿತ್ಸೆಯನ್ನು ಪಡೆಯುವ, ಯಶಸ್ವಿ ಶಸ್ತ್ರಚಿಕಿತ್ಸೆ ಹೊಂದುವ ಸಾಧ್ಯತೆಗಳು ಉತ್ತಮವಾಗಿರುತ್ತದೆ. ಯುವ ಜನತೆ ದುಶ್ಚಟಗಳಿಂದ ದೂರವಿದ್ದು ಆರೋಗ್ಯವಂತರಾಗಿ ಬಾಳಬೇಕು ಎಂದು ಡಾ.ವಗ್ಗರ ಸಲಹೆ ನೀಡಿದರು.

ತಾಳಿಕೋಟಿಯ ಹಿರೂರ ಶ್ರೀ ಅನ್ನದಾನೇಶ್ವರ ಸಂಸ್ಥಾನ ಹಿರೇಮಠದ ಜಯಸಿದ್ದೇಶ್ವರ ಶಿವಾಚಾರ್ಯರು ಮಾತನಾಡಿದರು.

ಗ್ರಾಮದ ಹಿರೇಮಠದ ಶಂಕ್ರಯ್ಯ ಗುರಲಿಂಗಯ್ಯ ಹಿರೇಮಠ. ಸದ್ಗುರು ವಿರೇಶ್ವರ ಮಠದ ಪ್ರಮುಖ ಅರ್ಚಕ ಶಾಂತಯ್ಯ ಮಠವತಿ ವೇದಿಕೆ ಮೇಲಿದ್ದರು.

ಗುರುನಾಥ ಮ್ಯೆಂದರಗಿ ಸೇವೆ ಮಾಡಿದರು. ಮಹೇಶ ಕುಮಾರ ಗವಾಯಿ ಭಂಟನೂರ ಹಾಗೂ ಮಹಾಂತೇಶ ಕಾಳಗಿ ಸಂಗೀತ ಸೇವೆ ನೆರವೇರಿಸಿದರು.

ಅಖಿಲ ಭಾರತ ಗಾಣಿಗ ಸಮಾಜದ ರಾಜ್ಯ ಪ್ರಧಾನ ಕಾರ್ಯದರ್ಶಿ

ಪ್ರಕಾಶ ತುಪ್ಪದ ಸ್ವಾಗತಿಸಿದರು. ರುದ್ರಗೌಡ ಮಾಗಣಗೇರಿ ನಿರೂಪಿಸಿದರು. ಚಂದ್ರಕಾಂತ ರಾಮಗೊಂಡ ವಂದಿಸಿದರು.

ಬಸಣ್ಣ ಯಾಳವಾರ, ಶಂಕರಲಿಂಗ ರಾಮಗೊಂಡ, ಚಂದ್ರಕಾಂತ ಬೂಶೆಟ್ಟಿ, ಎಂ.ಡಿ.ಪಾಟೀಲ, ಶಿವಯ್ಯ ಹಿರೇಮಠ, ಜಿ ಎಂ ಬಿರಾದಾರ, ಬಸಣ್ಣ ರಾಮಗೊಂಡ, ಶಿವಶಂಕರ ದೇ ಬಿರಾದಾರ, ಕ್ರೀಡಾ ಪಟು ಮಲ್ಲನಗೌಡ ಬಿರಾದಾರ, ಮುಖ್ಯ ಶಿಕ್ಷಕ ಯಲ್ಲಪ್ಪ ಬೂದಿಹಾಳ, ಈರಣ್ಣ ಜೋಗೂರ, ಭೀಮರಾಯ ಪತ್ತಾರ, ಮಲ್ಲಿಕಾರ್ಜುನ ಪಡಗಾನೂರ, ಸಿದ್ದು ಕರಲಗಿ, ಮಾಣಿಕ ಪ್ರಭು ಜೋಗೂರ, ಸಿದ್ದಣ್ಣ ಮಾಗಣಗೇರಿ, ಮಲ್ಲಿನಾಥ ಅರಳಗುಂಡಗಿ, ನರಸಪ್ಪ ಮೋರಟಗಿ, ಶಾಂತಪ್ಪ ದೂಳಖೇಡ, ಈರಣ್ಣ ಮಾಗಣಗೇರಿ, ಜಿ.ಎಸ್.ಶಿವಶಿಂಪಿಗೇರ,

ನಿಂಗಣ್ಣ ಕುಂಬಾರ, ಅಪ್ಪು ನಾವಿ, ಬಸವರಾಜ ಅಗಸರ

ಸೇರಿದಂತೆ ಅನೇಕರಿದ್ದರು.

# ಅಸಮರ್ಪಕ ವಿದ್ಯುತ್ ಪೂರೈಕೆಗೆ ಬೇಸತ್ತ ರೈತ ಆತ್ಮಹತ್ಯೆಗೆ ಯತ್ನ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ : ಸರಿಯಾಗಿ ವಿದ್ಯುತ್ ಪೂರೈಕೆಯಾಗುತ್ತಿಲ್ಲ ಎಂದು ಬೇಸರಗೊಂಡ ರೈತನೋರ್ವ ಆತ್ಮಹತ್ಯೆ ಮಾಡಿಕೊಳ್ಳಲು ಯತ್ನಿಸಿರುವ ಘಟನೆ ತಾಲೂಕಿನ ಢವಳಗಿ ಗ್ರಾಮದಲ್ಲಿ ನಡೆದಿದೆ.

ತಾಲೂಕಿನ ಆಲಕೊಪ್ಪರ ಗ್ರಾಮದ ರಾಮನಗೌಡ ಬಿರಾದಾರ ಆತ್ಮಹತ್ಯೆಗೆ ಪ್ರಯತ್ನಿಸಿದ ವ್ಯಕ್ತಿ. ಮೂಲತಃ ರೈತಾಪಿ ಕುಂಟುಂಬದಿಂದ ಬಂದಿದ್ದ ಈತನ ಉದ್ಯೋಗ ಒಕ್ಕಲುತನ. ತನ್ನ ಜಮೀನುಗಳನ್ನೇ ನಂಬಿ ಸಾಗುವಳಿ ಮಾಡಿಕೊಂಡು ಬದುಕು ನಡೆಸುತ್ತಿರುವ ಈತನಿಗೆ ಕಳೆದ ಕೆಲವು ದಿನಗಳಿಂದ ಸರಿಯಾಗಿ ವಿದ್ಯುತ್ ಪೂರೈಕೆಯಾಗದ ಹಿನ್ನೆಲೆಯಲ್ಲಿ ತನ್ನ ಕುಂಟುಂಬವನ್ನು ಸಲಹುವುದು ಹೇಗೆ ಎಂಬ ಚಿಂತೆಯಲ್ಲಿ ಆತ್ಮಹತ್ಯೆಯೇ ಪರಿಹಾರವೆಂದು ಇಲ್ಲಿಗೆ ಬಂದಿರುವದಾಗಿ ಸ್ವತಃ ತಾನೇ ಹೇಳಿಕೊಂಡಿದ್ದಾನೆ.

ತಮಗೆ ವಿದ್ಯುತ್ ಪೂರೈಸುವ ಢವಳಗಿಯ ಕೆಇಬಿಯಲ್ಲಿನ ವಿದ್ಯುತ್ ಲೈನ್ ಹಿಡಿದು ಆತ್ಮಹತ್ಯೆಗೆ ಯತ್ನಿಸಿದ್ದು ಕೆಇಬಿ ಸಿಬ್ಬಂದಿ ಈತನನ್ನು ಅನಾಹುತದಿಂದ ತಪ್ಪಿಸಿ 112 ಮೂಲಕ ಪೊಲೀಸರಿಗೆ ತಿಳಿಸಿದ್ದು 112 ಸಿಬ್ಬಂದಿ ಮುದ್ದೇಬಿಹಾಳ ಠಾಣೆಗೆ ಒಪ್ಪಿಸಿದ್ದಾರೆ.

**ಉದಯರಶ್ಮಿ ನೀವೂ ಬರೆಯಿರಿ..**

ನಿಮ್ಮೂರಿನ, ನಿಮ್ಮ ಸುತ್ತಮುತ್ತಲಿನ ಸಮಸ್ಯೆಗಳ ಮೇಲೆ ನೀವೂ ಬೆಳಕು ಚೆಲ್ಲಬಹುದು, ಸಾಮಾಜಿಕ ಸಮಸ್ಯೆಗಳು ಹಾಗೂ ಮಾನವಿಯ ಕಳಕಳಿಯ ಬರಹಗಳನ್ನು ಸಂಬಂಧಿಸಿದ ಫೋಟೊದೊಂದಿಗೆ ನಮಗೆ ಕಳುಹಿಸಿ, 'ಉದಯರಶ್ಮಿ' ದಿನಪತ್ರಿಕೆಯಲ್ಲಿ ಆದ್ಯತೆಯ ಮೇಲೆ ಪ್ರಕಟಿಸಲಾಗುವುದು.

– ಸಂಪಾದಕ

ಇಲ್ಲಿ ಕಳುಹಿಸಿ.. **Whatsapp : 7026028778**

**email: editor.udayarashmi@gmail.com**

## ಕೇಂದ್ರಕ್ಕೆ 17901 ಕೋಟಿ ರೂ.ಗಳ ಪ್ರಸ್ತಾವನೆ । ಎಚ್‌ಡಿಕೆ ಕೇಂದ್ರದ ಮೇಲೆ ಒತ್ತಡ ಹೇರಲೆಂದ ಸಿಎಂ

# ಬರ ಪರಿಹಾರ ಬಿಡುಗಡೆ ಕೇಂದ್ರದ ಬದ್ಧತೆ :ಸಿಎಂ

**ಉದಯರಶ್ಮಿ ನ್ಯೂಸ್**



ಹಾಸನ: ರಾಜ್ಯಕ್ಕೆ ಬರ ಪರಿಹಾರ ಬಿಡುಗಡೆ ಮಾಡದ ಕೇಂದ್ರದ ವಿರುದ್ಧ ವಾಗ್ದಾಳಿ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜ್ಯದ ಪ್ರಸ್ತಾವನೆ ಪರಿಗಣಿಸಿ ಅನುದಾನ ಬಿಡುಗಡೆ ಮಾಡಬೇಕಾಗಿರುವುದು ಕೇಂದ್ರ ಸರ್ಕಾರದ ಕರ್ತವ್ಯ ಎಂದು ಬುಧವಾರ ಹೇಳಿದ್ದಾರೆ.

ಹಾಸನಾಂಬ ದೇವಸ್ಥಾನಕ್ಕೆ ಭೇಟಿ ನೀಡುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ, ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ಸಮನ್ವಯದಿಂದ ಕೆಲಸ ಮಾಡಬೇಕು. ಕೇಂದ್ರ ಸಹ ರಾಜ್ಯಗಳಿಗೆ ಸಹಕಾರ ನೀಡಬೇಕು. ರಾಜ್ಯಗಳು ಜನರ ತೆರಿಗೆ ಹಣವನ್ನು ಕೇಂದ್ರಕ್ಕೆ ಕಟ್ಟಿರುತ್ತವೆ. ಸಮಯಕ್ಕೆ ಸರಿಯಾಗಿ ಪರಿಹಾರ ಒದಗಿಸುವುದು ಕೇಂದ್ರದ ಕರ್ತವ್ಯ ಎಂದರು.

ಕೇಂದ್ರ ಸರ್ಕಾರ, ಮಾರ್ಗಸೂಚಿಗಳ ಪ್ರಕಾರ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ(ಎನ್‌ಡಿಆರ್‌ಎಫ್) ಅಡಿಯಲ್ಲಿ ರಾಜ್ಯಗಳಿಗೆ ಇನ್‌ಪುಟ್ ಸಬ್ಸಿಡಿ ಬಿಡುಗಡೆ ಮಾಡಬೇಕು. ರಾಜ್ಯ ಸರ್ಕಾರ 17901 ಕೋಟಿ ರೂ.ಗಳ ಪ್ರಸ್ತಾವನೆಯನ್ನು ಕೇಂದ್ರಕ್ಕೆ ಕಳುಹಿಸಿದೆ. ಕೇಂದ್ರ ತಂಡ ಭೇಟಿ ನೀಡಿ ಸಮೀಕ್ಷೆ ನಡೆಸಿದ್ದರೂ ಕೇಂದ್ರ ಇನ್ನೂ ಯಾವುದೇ ಪರಿಹಾರ ಬಿಡುಗಡೆ ಮಾಡಿಲ್ಲ ಎಂದು ಕಿಡಿ ಕಾರಿದರು.

ಬರ ಪರಿಸ್ಥಿತಿ ನಿಭಾಯಿಸುವಲ್ಲಿ ರಾಜ್ಯ ಸರ್ಕಾರದ ಜವಾಬ್ದಾರಿ ಪ್ರಶ್ನಿಸಿದ ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿದ ಸಿಎಂ, ಜೆಡಿ–ಎಸ್ ಎನ್‌ಡಿಎ ಭಾಗವಾಗಿರುವುದ–ರಿಂದ ಎಚ್.ಡಿ ಕುಮಾರಸ್ವಾಮಿ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಬಹುದು ಎಂದರು.

# ಸತೀಶ್ ಜಾರಕಿಹೊಳಿ & ಡಿಸಿಎಂ ಡಿಕೆ ಶಿವಕುಮಾರ್ ಗೌಪ್ಯ ಸಭೆ!

**ಉದಯರಶ್ಮಿ ನ್ಯೂಸ್**



ಬೆಂಗಳೂರು: ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಂಗಳವಾರ ಸಿಎಂ ಸಿದ್ದರಾಮಯ್ಯ ಅವರ ಕಟ್ಟಾ ಬೆಂಬಲಿಗರಾಗಿರುವ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಭೇಟಿಯಾಗಿದ್ದು, ಗೌಪ್ಯ ಸಭೆ ನಡೆಸಿದ್ದಾರೆ.

ಕ್ರೆಸೆಂಟ್ ರಸ್ತೆಯಲ್ಲಿರುವ ಸತೀಶ್ ಜಾರಕಿಹೊಳಿ ಅವರ ಸರ್ಕಾರಿ ನಿವಾಸದಲ್ಲಿ ನಡೆದಿರುವ ಈ ಸಭೆ ರಾಜ್ಯ ರಾಜಕೀಯದಲ್ಲಿ ಸಂಚಲನ ಮೂಡಿಸಿದ್ದು, ವಿಶೇಷವಾಗಿ ಕಾಂಗ್ರೆಸ್‌ನಲ್ಲಿ ಊಹಾಪೋಹಗಳನ್ನು ಹುಟ್ಟುಹಾಕಿದೆ.

ಸಭೆ ಮುಗಿದ ಕೂಡಲೇ ಶಿವಕುಮಾರ್ ನವದೆಹಲಿಗೆ ತೆರಳಿದ್ದಾರೆ. ಈ ಹಿಂದೆ ಜಾರಕಿಹೊಳಿ ತಮ್ಮ ತವರು ಜಿಲ್ಲೆ ಬೆಳಗಾವಿಯಲ್ಲಿ ಶಿವಕುಮಾರ್ ಹಸ್ತಕ್ಷೇಪದ ಬಗ್ಗೆ ತಮ್ಮ ಆಕ್ಷೇಪವನ್ನು ವ್ಯಕ್ತಪಡಿಸಿದ್ದರು. ಜಿಲ್ಲೆಯಲ್ಲಿ ಜಾರಕಿಹೊಳಿ ಕುಟುಂಬದ ಪ್ರಾಬಲ್ಯಕ್ಕೆ ಸವಾಲು ಹಾಕಿ ಲಿಂಗಾಯತ ನಾಯಕಿಯಾಗಿ ಹೊರಹೊಮ್ಮುತ್ತಿರುವ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಶಿವಕುಮಾರ್ ನೀಡಿದ ಪ್ರಾಮುಖ್ಯತೆ ಮತ್ತು ಬೆಂಬಲದಿಂದ ಪಿಡಬ್ಲ್ಯೂಡಿ ಸಚಿವರು ಅಸಮಾಧಾನಗೊಂಡಿದ್ದರು.

ಇತ್ತೀಚೆಗೆ ಶಿವಕುಮಾರ್ ಬೆಳಗಾವಿಗೆ ಆಗಮಿಸಿದಾಗ ಅವರಿಗೆ ಸ್ವಾಗತ ಕೋರುವ ಕಾರ್ಯಕ್ರಮದಿಂದಲೂ ಸತೀಶ್ ಜಾರಕಿಹೊಳಿ ಹೊರಗುಳಿದಿದ್ದರು. ಅಲ್ಲದೇ, ಶಿವಕುಮಾರ್ ಅವರನ್ನು ಹೊರಗಿಟ್ಟು ಸಿಎಂ ಸಿದ್ದರಾಮಯ್ಯ ಅವರು ಭಾಗವಹಿಸಿದ್ದ ಡಿನ್ನರ್ ಮೀಟ್‌ನಲ್ಲಿ ಹಾಜರಾಗಿದ್ದರು. ಈ ಬೆಳವಣಿಗೆ ದೊಡ್ಡ ಸಂಚಲನ ಮೂಡಿಸಿತ್ತು. 2028ರಲ್ಲಿ ಸಿಎಂ ಸ್ಥಾನಕ್ಕೆ ನಾನು ಕೂಡಾ ಸ್ಪರ್ಧಿ ಎಂದು ಜಾರಕಿಹೊಳಿ ಹೇಳಿದ್ದರು.

ಸಭೆಯ ನಂತರ ಮಾಧ್ಯಮದವರೊಂದಿಗೆ ಮಾತನಾಡಿದ ಜಾರಕಿಹೊಳಿ, ಶಿವಕುಮಾರ್ ಅವರು ಪಕ್ಷ ಸಂಘಟನೆ, ಲೋಕಸಭೆ ಚುನಾವಣೆ, ಜಿಲ್ಲಾಧ್ಯಕ್ಷರ ಬದಲಾವಣೆಗೆ ಸಂಬಂಧಿಸಿದಂತೆ ತಮ್ಮೊಂದಿಗೆ ಚರ್ಚೆ ನಡೆಸಿದ್ದಾರೆ. ಅದನ್ನು ಬಿಟ್ಟು ಬೇರೆ ವಿಷಯ ಬಗ್ಗೆ ಚರ್ಚೆ ನಡೆಸಿಲ್ಲ ಎಂದು ತಿಳಿಸಿದರು.

ಆದರೆ ಈ ಸಭೆಯ ಮೂಲಕ ಸಚಿವ ಜಾರಕಿಹೊಳಿ ಅವರೊಂದಿಗಿನ ಅಸಮಾಧಾನ ನಿವಾರಿಸಲು ಶಿವಕುಮಾರ್ ಬಯಸಿದ್ದಾರೆ ಎಂದು ಪಕ್ಷದ ಮೂಲಗಳು ಹೇಳಿವೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಪಕ್ಷ ಸಂಘಟನೆಗೆ ಸಂಬಂಧಿಸಿದಂತೆ ಚರ್ಚಿಸಲು ಶಿವಕುಮಾರ್ ನವದೆಹಲಿಗೆ ತೆರಳಿದ್ದಾರೆ ಎನ್ನಲಾಗಿದೆ.

# ಬಿ.ಎಸ್.ವೈ ಕೇಂದ್ರದಿಂದ ಪರಿಹಾರ ಕೊಡಿಸಲಿ :ಸಿಎಂ ಸಿದ್ದರಾಮಯ್ಯ

**ಉದಯರಶ್ಮಿ ನ್ಯೂಸ್**



ಬೆಂಗಳೂರು: ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಬರ ಅಧ್ಯಯನಕ್ಕೆ ಹಾಸನಕ್ಕೆ ತೆರಳಿರುವುರಲ್ಲಿ ನಮ್ಮ ತಕರಾರು ಇಲ್ಲ. ಕೇಂದ್ರ ಸರ್ಕಾರದ ಬಳಿ ಕೇಳಿ ನಮಗೆ ಪರಿಹಾರ ಕೊಡಿಸಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಈ ಕುರಿತು ಮಂಗಳವಾರ ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಬರ ಅಧ್ಯಯನವನ್ನು ಕೇಂದ್ರದ ತಂಡ ನಡೆಸಿ ಹೋಗಿದ್ದಾರೆ. ಕೇಂದ್ರ ಸರ್ಕಾರಕ್ಕೆಅವರಿನ್ನೂ ವರದಿ ನೀಡಿಲ್ಲ. ಬಿಜೆಪಿ ಯವರು ರಾಜಕಾರಣ ಮಾಡಲು ಅಧ್ಯಯನ ಮಾಡುತ್ತೇವೆ ಎನ್ನುತ್ತಿದ್ದಾರೆ. ಕೇಂದ್ರ ಸರ್ಕಾರದ ಬಳಿ ಕೇಳಿ ನಮಗೆ ಪರಿಹಾರ ಕೊಡಿಸಲಿ. ಅದನ್ನು ಬಿಟ್ಟು ಅಧ್ಯಯನ ಮಾಡುತ್ತೇವೆ ಎನ್ನುತ್ತಾರೆ. ಮಾಡಲಿ, ನಮ್ಮ ತಕರಾರು ಇಲ್ಲ ಎಂದು ಹೇಳಿದರು.

ಕೇಂದ್ರ ಸರ್ಕಾರಕ್ಕೆ 17900 ಕೋಟಿ ರೂ ಗಳ ಪರಿಹಾರ ಕೋರಲಾಗಿದೆ. ರಾಜ್ಯದಲ್ಲಿ ಸುಮಾರು 33, 700 ಕೋಟಿ ನಷ್ಟವಾಗಿದೆ. ರೈತರು ಹಾಗೂ ಕರ್ನಾಟಕದ ಬಗ್ಗೆ ಕಾಳಜಿ ಇದ್ದರೆ ಬಿಜೆಪಿ ಪರಿಹಾರ ಕೊಡಿಸಲಿ ಎಂದರು. 25 ಬಿಜೆಪಿ ಸಂಸದರು ಪರಿಹಾರ ಕೊಡಿಸುವುದನ್ನು ಮೊದಲು ಮಾಡಲಿ. ನಮ್ಮ ಮಂತ್ರಿಗಳಿಗೆ ಸಂಬಂಧ ಪಟ್ಟ ಸಚಿವರು ಬಿಜೆಪಿಗೆ ಸಮಯವನ್ನೇ ನೀಡಿಲ್ಲ. ಇವರಿಗೆ ಕರ್ನಾಟಕದ ಬಗ್ಗೆ ಯಾವ ಕಾಳಜಿ ಇದೆ ಎಂದರು.

ಬರದ ಕುರಿತು ವೈಜ್ಞಾನಿಕ ಸಮೀಕ್ಷೆಯಾಗಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಹೇಳಿರುವ ಬಗ್ಗೆ ಮಾತನಾಡಿ ಸಮೀಕ್ಷೆ ಮಾಡಿದವರು ಕೇಂದ್ರ ಸರ್ಕಾರದ ತಂಡ. ಈ ಬಗ್ಗೆ ಕೇಂದ್ರ ಸರ್ಕಾರಕ್ಕೆ ಬರೆಯಬೇಕು ಎಂದರು.

## ಡಿ.ಬಿ.ಚಂದ್ರೇಗೌಡ ನಿಧನಕ್ಕೆ ಸಿಎಂ ಸಂತಾಪ

ಹಿರಿಯ ರಾಜಕಾರಣಿ ಡಿ.ಬಿ.ಚಂದ್ರೇಗೌಡ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಚಂದ್ರೇಗೌಡ ಅವರು ರಾಜಕಾರಣದಲ್ಲಿ ಬಹಳ ದೀರ್ಘಕಾಲ ಇದ್ದವರು. ಕಾಂಗ್ರೆಸ್ ಬಿಟ್ಟು ಜನತಾ ಪಕ್ಷ ಸೇರಿದ್ದರು. ವಿಧಾನಸಭಾಧ್ಯಕ್ಷರಾಗಿದ್ದರು. ವಿವಿಧಪಕ್ಷದ ನಾಯಕರಾಗಿದ್ದರು. ಮತ್ತೆ ಕಾಂಗ್ರೆಸ್ ಸೇರಿ ಕಾನೂನು ಸಚಿವರಾಗಿದ್ದರು. ಬಿಜೆಪಿಗೆ ಸೇರಿ ಸಂಸದರಾಗಿದ್ದರು. ವಿವಿಧ ಹಂತಗಳಲ್ಲಿ ಕೆಲಸ ಮಾಡಿದವರು. ಅತ್ಯಂತ ಹಿರಿಯ ಹಾಗೂ ಬುದ್ದಿವಂತ ರಾಜಕಾರಣಿಯಾಗಿದ್ದ ಅವರು ಸಾಹಿತ್ಯದ ಬಗ್ಗೆಯೂ ಅಪಾರವಾಗಿ ಓದಿ ತಿಳಿದುಕೊಂಡಿದ್ದರು. ಅವರು ನಿಧನರಾಗಿರುವುದು ಕರ್ನಾಟಕದ ರಾಜಕಾರಣಕ್ಕೆ ನಷ್ಟ ಉಂಟಾಗಿದೆ. ಅವರ ಆತ್ಮಕ್ಕೆ ಚಿರಶಾಂತಿ ದೊರಕಲಿ ಎಂದು ಪ್ರಾರ್ಥನೆ ಮಾಡುವುದಾಗಿ ಮುಖ್ಯಮಂತ್ರಿಗಳು ತಿಳಿಸಿದರು.

# ಕನ್ನಡವೇ ನಮ್ಮಮ್ಮ



**ಭಾವರಶ್ಮಿ**


–ಚೈತ್ರಾ ಆರ್.ಕೆ
("ನಮ್ಮ ಕಥಾ ಅರಮನೆ" ಬರಹಗಾರರು)

**ಉದಯರಶ್ಮಿ ದಿನಪತ್ರಿಕೆ**

ಕನ್ನಡವೇ ನಮ್ಮಮ್ಮ ಅವಳಿಗೆ ಕೈ ಮುಗಿಯಮ್ಮ ಕಾಪಾಡೋ ತಾಯಿಯಿವಳು ಎಂಬ ಸಾಲಿನಂತೆಯೇ ಕನ್ನಡವನ್ನು ನಾವು ಉಳಿಸಿ ಬೆಳೆಸಬೇಕಾಗಿದೆ.

ದ್ರಾವಿಡರ ಕಾಲದಿಂದ ಕನ್ನಡವೆಂಬ ಭಾಷೆ ಹರಿದು ಬಂದಿದೆ. ಕರುನಾಡಿನ ಹಿರಿಮೆ ಒಮ್ಮೆಲೇ ಬೆಳೆದು ಬಂದಿಲ್ಲ. ಕಾಲಕಾಲಕ್ಕೆ ಟಿಸಿಲೊಡೆದು ಎಲ್ಲ ಕಡೆ ಹಬ್ಬುತ್ತಾ ಬಂದಿದೆ. ಭರತ ಖಂಡದ ಅವಿಭಾಜ್ಯ ಅಂಗವಾಗಿರುವ ಕರ್ನಾಟಕ ಕುಶಲ ಕಲೆಯಲ್ಲಿ ಭಾರತೀಯ ಮನೋಧರ್ಮವನ್ನೇ ಅವಲಂಬಿಸಿ ಬೆಳೆಯಿತು. ವಿವಿಧ ರಾಜವಂಶಗಳು ಈ ನಾಡಿಗೆ ಬಂದು ಮತ್ತು ಇಲ್ಲಿಯೇ ಹುಟ್ಟಿ ಬೆಳೆದ ಧಾರ್ಮಿಕ ಆಂದೋಲನಗಳು, ಜನಪದ ರೂಪಿಸಿದ ಬಗೆ, ಸಾಹಿತ್ಯ, ವಾಸ್ತುಶಿಲ್ಪ, ಸಂಗೀತ, ನೃತ್ಯ ಎಲ್ಲದರಲ್ಲೂ ವೈಶಿಷ್ಟ್ಯವನ್ನು ಗುರುತಿಸಬಹುದು. ಕದಂಬರ ಮಯೂರಶರ್ಮನಿಂದ ಹಿಡಿದು 2ನೇ ಪುಲಿಕೇಶಿ, ಪ್ರೌಢದೇವರಾಯ, ಕೃಷ್ಣದೇವರಾಯರ ಕಾಲದವರೆಗೂ ಸಾಕಷ್ಟು ಯುದ್ಧ, ನಷ್ಟಗಳನ್ನು ಕಂಡಿತು. ನೇಪಾಳದವರೆಗೂ ಕನ್ನಡ ರಾಜವಂಶಗಳ ಪ್ರಭಾವ ಹಬ್ಬಿತು. ದಕ್ಷಿಣದ ಕಾವೇರಿಯಿಂದ ಉತ್ತರದ ಗೋದಾವರಿವರೆಗೆ ಕನ್ನಡ ನಾಡು ಹಬ್ಬಿದೆ ಎಂದು ಕನ್ನಡದ ಮೊದಲ ಗ್ರಾಂಥಿಕ ದಾಖಲೆ ಕವಿರಾಜಮಾರ್ಗದಲ್ಲಿ ಹೇಳಿದ್ದಾರೆ".

ಕ್ರಿ.ಶ 450 ರ "ಹಲ್ಮಿಡಿ ಶಾಸನ "ಕನ್ನಡದಲ್ಲಿ ದೊರೆತ ಮೊದಲ ಶಾಸನವಾಗಿದೆ.ಪಂಪ, ರನ್ನ, ಕುಮಾರವ್ಯಾಸರಾದಿಯಾಗಿ ಹಲವಾರು ಕವಿಗಳು, ಲೇಖಕರು, ವಿಮರ್ಶಕರು, ವಿಚಾರವಾದಿಗಳು ಕನ್ನಡ ನಾಡಿನ ಐಸಿರಿಯನ್ನು ಹಾಡಿಹೊಗಳಿದ್ದಾರೆ. ಅನೇಕ ಋಷಿ ಮುನಿಗಳು ಗಿಡಮೂಲಿಕೆಗಳಿಂದ ಆಯುರ್ವೇದ ಔಷಧಿಗಳನ್ನು ತಯಾರಿಸಿದರು. ಕುವೆಂಪು, ಬೇಂದ್ರೆಯಂತಹ ಪ್ರಸಿದ್ಧ ಕವಿಗಳು ಕನ್ನಡಕ್ಕೆ 8 ಜ್ಞಾನಪೀಠ ಪ್ರಶಸ್ತಿಗಳನ್ನು ತಂದುಕೊಟ್ಟಿದ್ದಾರೆ. ಕನ್ನಡ ಭಾಷೆಗೆ ಶಾಸ್ತ್ರೀಯ ಸ್ಥಾನಮಾನ ನೀಡಲು ಸಾಕಷ್ಟು ಸಾಹಿತಿಗಳು ಶ್ರಮವಹಿಸಿದರು.





ವಿನೋಬಾ ಭಾವೆಯವರು ಕನ್ನಡವನ್ನು "ವಿಶ್ವ ಲಿಪಿಗಳ ರಾಣಿ" ಎಂದು ಬಣ್ಣಿಸಿದ್ದಾರೆ.ಕನ್ನಡವೇ ಸತ್ಯ ಕನ್ನಡವೇ ನಿತ್ಯ – ಕುವೆಂಪುರವರು, ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು –ಹುಯಿಲಗೋಳ ನಾರಾಯಣರಾವ್ ರವರು ವರ್ಣಿಸಿದ್ದಾರೆ.

ಹಚ್ಚಹಸಿರಿನ ಬೆಟ್ಟಗುಡ್ಡಗಳು, ನದಿ, ಸಾಗರಗಳು, ಫಲವತ್ತಾದ ಭೂಪ್ರದೇಶಗಳು, ಗಿರಿಶಿಖರ ಪರ್ವತಗಳು ತಲೆಯೆತ್ತಿ ನಿಂತಿವೆ. ಸಕಲ ಜೀವರಾಶಿಗಳ ರಕ್ಷಣೆಗಾಗಿ ಪ್ರಾಣಿ ಸಂಗ್ರಹಾಲಯ, ಪಕ್ಷಿಧಾಮಗಳನ್ನು ನಿರ್ಮಿಸಿದ್ದಾರೆ. ಬೇಲೂರು, ಹಳೇಬೀಡು, ಗೊಮ್ಮಟೇಶ್ವರ, ವಾಸ್ತುಶಿಲ್ಪ, ಶಿಲ್ಪಕಲೆಗಳು ಇವೆಲ್ಲ ಸಿರಿಗನ್ನಡ ನಾಡಿನ ಪರಂಪರೆಯನ್ನು ಹಾಡಿಹೊಗಳುತ್ತಿವೆ. ಕೀರ್ತನೆಗಳು, ದಾಸ ಸಾಹಿತ್ಯ, ಚಂಪೂ, ರಗಳೆ, ಷಟ್ಪದಿ ಕಾವ್ಯಗಳಲ್ಲಿ ಕನ್ನಡಾಂಬೆಯ ವೈಭವದ ಮೆರಗನ್ನು ಕವಿಪುಂಗವರು ಸೆರೆಹಿಡಿದು ಬಣ್ಣಿಸಿದ್ದಾರೆ.ಕರ್ನಾಟಕದ ಏಕೀಕರಣಕ್ಕಾಗಿ ಅನೇಕ ಕನ್ನಡ ಕವಿಗಳು ಸಾಕಷ್ಟು ಹೋರಾಟ ಮಾಡಿದ್ದಾರೆ.ಸ್ವಾತಂತ್ರದ ನಂತರ ಹಲವು ವರ್ಷಗಳಾದ ಮೇಲೆ ಮೈಸೂರು ಎಂಬ ಹೆಸರನ್ನು ಬದಲಿಸಿ "ಕರ್ನಾಟಕ ರಾಜ್ಯ" ಎಂಬ ನಾಮಕರಣ ಮಾಡಿದರು. ಸದ್ಯ ಕರ್ನಾಟಕದಲ್ಲಿ 31 ಜಿಲ್ಲೆಗಳನ್ನು ಹೊಂದಿದೆ. ಬೇರೆ ಬೇರೆ ಪ್ರಾಂತ್ಯಗಳಲ್ಲಿ ಕನ್ನಡ ಭಾಷೆಯು ರೂಪಾಂತರ ಹೊಂದಿ ವೈವಿಧ್ಯಮಯ ಅರ್ಥ, ಗ್ರಾಂಥಿಕ ರೂಪದಲ್ಲಿ ಜನರು ಕನ್ನಡ ಭಾಷೆಯನ್ನು ಮಾತನಾಡುತ್ತಾರೆ. ಹೀಗೆ ಕನ್ನಡ ನಾಡು ತನ್ನ ವೈಭವವನ್ನು ವಿಶಾಲವಾಗಿ ಹರಡಿದೆ.

ಕನ್ನಡವು ಪೋಣಿಸಿದ ಮುತ್ತುಗಳಂತೆ ಮುದ್ದಾದ ಲಿಪಿಯನ್ನು ಹೊಂದಿದೆ. ಕೇಳಲು ಚಂದ ಮಾತನಾಡಲೂ ಇನ್ನೂ ಚೆಂದ.ಪರಭಾಷೆಯು ಅವಶ್ಯಕವಾಗಿದ್ದರೂ ಕನ್ನಡತನವನ್ನು ಎಂದಿಗೂ ಮರೆಯುವಂತಿಲ್ಲ.ಇಂತಹ ವೈವಿಧ್ಯಮಯ ನಾಡಿನ ಮಣ್ಣಿನಲ್ಲಿ ಜನಿಸಿರುವುದು ನಮ್ಮ ಪುಣ್ಯ."ಇದೇ ನಾಡು ಇದೇ ಭಾಷೆ ಎಂದೆಂದೂ ನಮ್ಮದಾಗಿರಲಿ". ಕೇವಲ ಕನ್ನಡ ರಾಜ್ಯೋತ್ಸವ ಬಂದಾಗ ಮಾತ್ರ ಕನ್ನಡವನ್ನು ನೆನೆಯದೆ ಪ್ರತಿ–ಕ್ಷಣವೂ ಕನ್ನಡವನ್ನು ಉಳಿಸೋಣ, ಬೆಳೆಸೋಣ,ಮೆರೆಸೋಣ.

ಜೈ ಕನ್ನಡಾಂಬೆ

# ಕೆಲವು ಶ್ರೀಮಂತರ ಶೋಕಿ, ಮೌಢ್ಯ, ದುರಹಂಕಾರ



**ಉದಯರಶ್ಮಿ ದಿನಪತ್ರಿಕೆ**

ಹುಲಿ ಉಗುರು, ಆನೆ ದಂತ, ನವಿಲು ಗರಿ, ಜಿಂಕೆ – ಹುಲಿಯ ಚರ್ಮ, ಮೀನಿನ ವಾಸ್ತು, ಹಾವಿನ ವಿಷ, ಸಾರಂಗದ ಕೊಂಬು, ಆನೆ – ಕರಡಿಯ ಕೂದಲು ಹೀಗೆ ಕೆಲವು ಸಂರಕ್ಷಿತ ಪ್ರಾಣಿಗಳ ವಸ್ತುಗಳನ್ನು ಉಪಯೋಗಿಸುವ ಖಯಾಲಿ..



**ಪ್ರಬುದ್ಧ ಮನಸ್ಸು ಸಮಾಜ**

ವಿವೇಕಾನಂದ ಎಚ್. ಕೆ.

ಪ್ರಕೃತಿಯ ಮಡಿಲಿನ ರಾಷ್ಟ್ರಕವಿ ಕುವೆಂಪು ಒಂದು ಕಡೆ ಹೇಳುತ್ತಾರೆ " ಹೂವು ಬಳ್ಳಿಗೆ ಅಲಂಕಾರವೇ ಹೊರತು ವಿಗ್ರಹಕ್ಕಲ್ಲ". ಹಾಗೆಯೇ ವಚನಕಾರ ಅಂಬಿಗರ ಚೌಡಯ್ಯ ಒಂದು ವಚನದಲ್ಲಿ ಹೇಳುವ ಸಾರಾಂಶ ಹೀಗಿದೆ..

"ಆರೈಕೆಗೆ ಬಿತ್ತಿದ ಗಿಡದ ಹೂವನ್ನು ಕೊಯ್ದು, ಊರಿನವರು ಬಾಯಾರಿಕೆಗಾಗಿ ಕಟ್ಟಿಸಿದ ಕೆರೆಯ ನೀರನ್ನು ತಂದು, ನಾಡಿನ ಜನರೆಲ್ಲ ನೋಡಲಿ ಎಂದು ಆಡಂಬರಕ್ಕಾಗಿ, ಬಹಿರಂಗವಾಗಿ ಪೂಜೆ ಮಾಡುವುದು ತಪ್ಪು. ಹಾಗೆ ಪೂಜೆ ಮಾಡುವುದರಿಂದ ಅದರ ಪುಣ್ಯ ಹೂವಿಗೋ, ನೀರಿಗೋ ಅಥವಾ ಪೂಜಿಸಿದ ಮನುಷ್ಯನಿಗೋ ನನಗಂತೂ ಗೊತ್ತಿಲ್ಲ. ನಿನಗಾದರೂ ಗೊತ್ತಿದ್ದರೆ ಹೇಳು ಎಂದು ಅಂಬಿಗರ ಚೌಡಯ್ಯ ತನ್ನ ಇಷ್ಟ ದೈವವನ್ನು ಕೇಳುತ್ತಾರೆ "

ಆದರೆ ಈ ಮೂರ್ಖ – ಅಮಾನವೀಯ ಕೆಲವು ಜ್ಯೋತಿಷ್ಯ ಶಾಸ್ತ್ರಕಾರರು ಮೇಲೆ ಹೇಳಿದ ಪ್ರಾಣಿಗಳ ಅಂಗಾಂಗಗಳು ಧ–ರಿಸಿದರೆ ಮನುಷ್ಯರಿಗೆ ಲಾಭವಾಗುತ್ತದೆ ಎಂದು ಬಹಿರಂಗವಾಗಿ ಹೇಳುತ್ತಾರೆ. ತಪ್ಪು ಕಲ್ಪನೆಯ ಪರಮಾವಧಿ. ಮಾಧ್ಯಮಗಳಿಗೆ ಅವರೇ ಮಹತ್ವದ ವ್ಯಕ್ತಿಗಳು..

ಮನುಷ್ಯನ ಆಸೆಗಳಿಗೆ ಮಿತಿಯೇ ಇಲ್ಲ. ಸಣ್ಣ ಮಟ್ಟದ ನಟರುಗಳು ದೊಡ್ಡ ಸ್ಟಾರ್ ಗಳಾಗುವುದು, ಸಾಮಾನ್ಯ ವ್ಯಕ್ತಿಗಳು ಜನಪ್ರಿಯ ಸ್ವಾಮೀ–ಜಿಗಳಾಗಿ ಖ್ಯಾತಿ ಪಡೆಯುವುದು, ಬಡ ಕಾರ್ಮಿಕ ಶ್ರೀಮಂತ ಉದ್ಯಮಿಯಾಗುವುದು, ಒಬ್ಬ ಪಕ್ಷದ ಕಾರ್ಯಕರ್ತ ಮಂತ್ರಿಯಂತ ಉನ್ನತ ಹುದ್ದೆಗೇರುವುದು ಈ ಸಮಾಜದಲ್ಲಿ ಸಹಜವಾಗಿ ನಡೆಯುತ್ತದೆ..

ಇದಕ್ಕಾಗಿ ಅವರ ಶ್ರಮ, ಪ್ರತಿಭೆ, ಪರಿಸ್ಥಿತಿ ಎಲ್ಲವೂ ಕಾರಣವಾಗಿರುತ್ತದೆ. ಆದರೆ ಅದನ್ನು ಸರಿಯಾಗಿ ಅಥ–ರ್ಮಾಡಿಕೊಳ್ಳದೆ, ಯಶಸ್ಸಿನ ನಂತರ ಅಷ್ಟಕ್ಕೇ ತೃಪ್ತಿಯಾಗಿ ಆ ಕ್ಷೇತ್ರದಲ್ಲಿ ಮತ್ತಷ್ಟು ಸಾಧನೆ ಮಾಡುತ್ತಾ, ಯಶಸ್ಸು ನೀಡಿದ ಸಮಾಜ–ಕ್ಕೆ ನಿಷ್ಕಲ್ಮಶವಾಗಿ ಒಂದಷ್ಟು ಸಹಾಯ ಮಾಡುವುದನ್ನು ಮರೆತು ಮತ್ತಷ್ಟು ಸುಖ ಸಂತೋಷ ಹಣ ಅಧಿಕಾರದ ವ್ಯಾಮೋಹಕ್ಕೆ ಬಲಿಯಾಗಿ ಈ ರೀತಿಯ ಮೂಢನಂಬಿಕೆಗಳಿಂದ ಕಾನೂನು ಬಾಹಿರ, ಧರ್ಮ ಬಾಹಿರ ಕೆಲಸಗಳಲ್ಲಿ ತೊಡಗುವ ಇವರ ವರ್ತನೆಗೆ ಏನು ಹೇಳುವುದು..



ಇಷ್ಟು ದಿನ ಈ ಬಗ್ಗೆ ಸರಿಯಾಗಿ ಸಾರ್ವಜನಿಕರಿಗೆ ಮಾಹಿತಿ ನೀಡಿ ಜಾಗೃತ ಗೊಳಿಸದ ಅರಣ್ಯ ಇಲಾಖೆಯವರ ಬೇಜವಾಬ್ದಾರಿ ಸಹ ಇಲ್ಲಿ ಎದ್ದು ಕಾಣುತ್ತದೆ..

ಮನುಷ್ಯನು ಸಹ ಒಂದು ಪ್ರಾಣಿ. ಆತನ ಯಾವ ಅಂಗಗಳೂ ಶ್ರೇಷ್ಠವೂ ಅಲ್ಲ ಕನಿಷ್ಠವೂ ಅಲ್ಲ. ಅದೊಂದು ಸಹಜ ಸೃಷ್ಟಿಯ ಕೊಡುಗೆ. ಅಷ್ಟು ಮಾತ್ರದ ಸಾಮಾನ್ಯ ಜ್ಞಾನವೂ ಇಲ್ಲದಾಯಿತೇ ಅಥ–ವಾ ತನ್ನ ಅಂತಸ್ತಿನ ಪ್ರದರ್ಶನದ ದುರಹಂಕಾರವೇ..

ಈ ಸಂದರ್ಭದಲ್ಲಿ ಈ ಸಮಾಜದಲ್ಲಿ ಪ್ರತಿನಿತ್ಯ ಅನರ್ಹ ಅಪಾಯಕಾರಿ ಶಾಸ್ತ್ರ ಹೇಳುವವ–ರಿಂದ ಮೌಢ್ಯ ಬಿತ್ತಿ ಈ ರೀತಿಯ ಘಟನೆಗಳಿಗೆ ಪ್ರಚೋದನೆ ನೀಡುತ್ತಿರುವ ಮಾಧ್ಯಮಗಳ ಮೇಲೆ ಸಹ ಕ್ರಮ ಕೈಗೊಳ್ಳಬೇಕು. ಆಗ ಇದನ್ನು ಬುಡ ಸಮೇತ ಕಿತ್ತು ಹಾಕಬಹುದು.


ನೆನಪಿಡಿ, ಈ ಸೃಷ್ಟಿಯಲ್ಲಿ ಎಲ್ಲರೂ ಸಹಜ ಆರೋಗ್ಯವಾಗಿ ಜೀವಿಸಬೇಕೆಂದರೆ ಪ್ರಕೃತಿಯ ಸಸ್ಯಗಳು, ಜೀವರಾಶಿಗಳು, ಬೆಟ್ಟ, ಗುಡ್ಡ, ಕಾಡು, ನದಿ, ಸಮುದ್ರ, ಸರೋವರ, ಹಿಮ ಪರ್ವತಗಳು, ಮರುಭೂಮಿಗಳು ಎಲ್ಲವೂ ತನ್ನ ಮೂಲ ಸ್ವರೂಪದಲ್ಲಿ ಅಸ್ತಿತ್ವದಲ್ಲಿ ಇರಬೇಕು. ಇಲ್ಲದಿದ್ದರೆ ಪ್ರಕೃತಿ ತನ್ನ ನಿಯಂತ್ರಣ ಮೀರುತ್ತದೆ. ಆಗ ಪ್ರಾಕೃತಿಕ ವಿಕೋಪಗಳು ಹೆಚ್ಚಾಗಿ ಎಲ್ಲಕ್ಕೂ ತೊಂದರೆಯಾಗುತ್ತದೆ. ಈಗ ಆಗುತ್ತಿರುವುದು ಸಹ ಅದೇ. ಇದನ್ನು ತಡೆಗಟ್ಟುವಲ್ಲಿ ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿ ಇದೆ. ದಯವಿಟ್ಟು ಸ್ವಲ್ಪ ಎಚ್ಚರಿಕೆ ವಹಿಸಿ..



**ಉದಯರಶ್ಮಿ ದಿನಪತ್ರಿಕೆ**

**ಕಾವ್ಯರಶ್ಮಿ**

ಶರಣಬಸಪ್ಪ ಕುಂಬಾರ್. ಪೂನಾ
("ನಮ್ಮ ಕಥಾ ಅರಮನೆ" ಬರಹಗಾರರು)




## ಅವಳೆಂದರೆ

ಬೆಳದಿಂಗಳ ಬೆಳಕಿನಷ್ಟೆ ಸುಂದರ
ಪ್ರೀತಿ ಮಮತೆ ಒಲವಿನ ಭಂಡಾರ
ಸಹನೆ,ಕ್ಷಮೆ,ಸಾಂತ್ವಾನಗಳ ಆಗರ }

ಮನೆ,ಮನ ಬೆಳಗುವ ನಂದಾದೀಪ
ದೇವನು ಸೃಷ್ಟಿಸಿದ ತನ್ನಯ ಸ್ವರೂಪ
ಸಂಸ್ಕೃತಿ,ಸಂಸ್ಕಾರಗಳ ಪ್ರತಿರೂಪ }

ಒಲವಧಾರೆ ಹರಿಸುವ ಗಂಗೆಯಿವಳು
ಹಸಿವು ಮರೆಸುವ ಮಾತೆಯಿವಳು
ಸೃಷ್ಟಿಯ ಅಪೂರ್ವ ಸೌಂದರ್ಯದವಳು ।



ಸದಾ ನಲಿಯುವ ಚೈತನ್ಯದ ಕಡಲು
ಪ್ರಕೃತಿಯ ಪ್ರತಿನಿಧಿಸುವ ಮಡಿಲು
ಕುಡಿಗಾಗಿ ನೋವು ಸಹಿಸುವ ಒಡಲು. ।